# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 76 | ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 | ಚಿತ್ರದುರ್ಗ | ದಿನಾಂಕ: 05–10–2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 02 Issue - 76 | RNI No: KARKAN/2023/88462 | Chitradurga | Date: 05-10-2024 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಚಾಮುಂಡೇಶ್ವರಿಗೆ ಕಾಂಗ್ರೆಸ್‌ನಿಂದ ಅವಮಾನ: ಆರ್.ಅಶೋಕ್ ಹೇಳಿಕೆ 2

ವಿದ್ಯಾರ್ಥಿಗಳು ಶಿಕ್ಷಣದೊಂದಿಗೆ ಆತ್ಮಸ್ಥೈರ್ಯ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು 3

ವಸತಿ ರಹಿತರಿಗಾಗಿ ಮನೆ ನಿರ್ಮಿಸಲು 21 ಎಕರೆ ಜಾಗ ಕಾಯ್ದಿರಿಸಿದ ಶಾಸಕ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಅ.8 ಮತ್ತು 9ರಂದು ಹೊಳಲ್ಕೆರೆಯಲ್ಲಿ ಸಮೀಕ್ಷೆ

» ಚಿತ್ರದುರ್ಗ

ಹೊಳಲ್ಕೆರೆ ತಾಲ್ಲೂಕಿನ ಗ್ರಾಮೀಣ ಪ್ರದೇಶಗಳಲ್ಲಿ ಇದೇ ಅ.8 ಮತ್ತು 10 ರಂದು ಮ್ಯಾನ್ಯುಯಲ್ ಸ್ಕಾವೆಂಜರ್‌ಗಳ ಸಮೀಕ್ಷಾ ಕ್ಯಾಂಪ್‌ಗಳನ್ನು ಹಮ್ಮಿಕೊಳ್ಳಲಾಗಿದೆ. ಅ.8 ರಂದು ಬಿ.ದುರ್ಗ ಗ್ರಾಮ ಪಂಚಾಯಿತಿಯಲ್ಲಿ ಸಮೀಕ್ಷಾ ಕ್ಯಾಂಪ್ ನಡೆಯಲಿದ್ದು, ಅಂದನೂರು, ಮುತ್ತುಗದೂರು, ಬಿ.ದುರ್ಗ, ಗುಂಜಿಗನೂರು ಗ್ರಾಮ ಪಂಚಾಯಿತಿಗಳು ಭಾಗವಹಿಸಲಿವೆ. ಚಿಕ್ಕಜಾಜೂರು ಗ್ರಾಮ ಪಂಚಾಯಿತಿಯಲ್ಲಿ ಕ್ಯಾಂಪ್ ನಡೆಯಲಿದ್ದು, ಚಿಕ್ಕಜಾಜೂರು, ಅಡನೂರು, ಚಿಕ್ಕ ಮ್ಮಿಗನೂರು, ಹಿರೇ ಎಮ್ಮಿಗನೂರು, ಅರೇಹಳ್ಳಿ ಗ್ರಾಮ ಪಂಚಾಯಿತಿಗಳು ಭಾಗವಹಿಸಲಿದೆ. ವಿಶ್ವನಾಥನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಕ್ಯಾಂಪ್ ನಡೆಯಲಿದ್ದು, ಎನ್.ಜಿ.ಹಳ್ಳಿ, ವಿಶ್ವನಾಥನಹಳ್ಳಿ, ಗುಂಡೇರಿ ಗ್ರಾಮ ಪಂಚಾಯಿತಿಗಳು ಭಾಗವಹಿಸಲಿವೆ. ಅ.9 ರಂದು ಚಿತ್ರಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಕ್ಯಾಂಪ್ ನಡೆಯಲಿದ್ದು, ತಾಳ್ಯ, ಮದ್ದೇರು, ಶಿವಗಂಗಾ, ಚಿತ್ರಹಳ್ಳಿ, ಟಿ.ನುಲೇನೂರು ಗ್ರಾಮ ಪಂಚಾಯಿತಿಗಳು ಭಾಗವಹಿಸಲಿದೆ. ಮಲ್ಲಾಡಿಹಳ್ಳಿ ಗ್ರಾಮ ಪಂಚಾತಿಯಲ್ಲಿ ಕ್ಯಾಂಪ್ ನಡೆಯಲಿದ್ದು, ಶಿವಪುರ, ಮಲ್ಲಾಡಿಹಳ್ಳಿ, ದುಮ್ಮಿ, ಆರ್.ನುಲೇನೂರು ಗ್ರಾಮ ಪಂಚಾಯಿತಿಗಳು ಭಾಗವಹಿಲಿದೆ.ರಾಮಗಿರಿಗ್ರಾಮಪಂಚಾಯಿತಿಯಲ್ಲಿ ಕ್ಯಾಂಪ್ ನಡೆಯಲಿದೆ.ರಾಮಗಿರಿ, ತಾಳಿಕಟ್ಟೆ, ತುಪ್ಪದಹಳ್ಳಿ, ಬಿದರಕೆರೆ, ಗಂಗಸಮುದ್ರ ಗ್ರಾಮ ಪಂಚಾಯಿತಿಗಳು ಭಾಗವಹಿಸಲಿವೆ. ಹೆಚ್.ಡಿ.ಪುರ ಗ್ರಾಮ ಪಂಚಾಯಿಯಲ್ಲಿ ಕ್ಯಾಂಪ್ ನಡೆಯಲಿದ್ದು, ಹೆಚ್.ಡಿ.ಪುರ, ಉಪ್ಪರಿಗೇನಹಳ್ಳಿ, ತೇಕಲವಟ್ಟಿ ಗ್ರಾಮ ಪಂಚಾಯಿತಿಗಳು ಭಾಗವಹಿಸಲಿವೆ. ಸಮೀಕ್ಷಾ ಕ್ಯಾಂಪ್‌ಗಳ ಉಸ್ತುವಾರಿಗೆ ಸಂಬಂಧಪಟ್ಟ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳನ್ನು ನಿಯೋಜನೆ ಮಾಡಲಾಗಿದೆ. ಗ್ರಾಮ ಪಂಚಾಯಿತಿಗಳಲ್ಲಿ ಆಯೋಜಿಸಿರುವ ಮ್ಯಾನ್ಯುಯಲ್ ಸ್ಕಾವೆಂಜರ್ ಸಮೀಕ್ಷಾ ಕ್ಯಾಂಪ್‌ಗಳಲ್ಲಿ ಸ್ವಯಂ ಘೋಷಿತ ಅರ್ಜಿಗಳನ್ನು ಪಡೆಯಬಹುದು.

### 10 ರವರೆಗೆ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಸಮೀಕ್ಷೆ

» ಚಿತ್ರದುರ್ಗ

ಜಿಲ್ಲೆಯ ನಗರಸಭೆ ವ್ಯಾಪ್ತಿಯಲ್ಲಿ ಈಗಾಗಲೇ ಅ.3 ರಿಂದ ನಗರದ ವಿವಿಧ ಭಾಗಗಳಲ್ಲಿ ಮ್ಯಾನ್ಯುಯಲ್ ಸ್ಕಾವೆಂಜರ್‌ಗಳ ಸಮೀಕ್ಷೆ ಪ್ರಾರಂಭವಾಗಿದ್ದು, ಅ.10 ರವರೆಗೆ ನಡೆಯಲಿದೆ. ಚಿತ್ರದುರ್ಗ ನಗರದ ವಾರ್ಡ್ ಸಂಖ್ಯೆ 25ರ ಜೆ.ಜೆ. ಹಟ್ಟಿ ನೀರಿನ ಟ್ಯಾಂಕ್ ಹತ್ತಿರ, ವಾರ್ಡ್ ಸಂಖ್ಯೆ 2ರ ಕಾಮನಬಾವಿ ಬಡಾವಣೆ ಚರ್ಚ್ ಹತ್ತಿರ, ವಾರ್ಡ್ ಸಂಖ್ಯೆ 13 ನೆಹರು ನಗರ 3ನೇ ಕ್ರಾಸ್, ವಾರ್ಡ್ ಸಂಖ್ಯೆ 23ರ ವೆಂಕಟೇಶ್ವರ ಟಾಕೀಸ್ ಹತ್ತಿರ, ವಾರ್ಡ್ ಸಂಖ್ಯೆ 33ರ ಬುದ್ಧ ನಗರ ಸ್ಟೇಡಿಯಂ ಹತ್ತಿರ, ವಾರ್ಡ್ ಸಂಖ್ಯೆ 35ರ ಗಾಂಧಿ ನಗರ ಅಂಗನವಾಡಿ ಹತ್ತಿರ, ವಾರ್ಡ್ ಸಂಖ್ಯೆ 1 ಸ್ವಾಮಿ ವಿವೇಕಾನಂದ ನಗರ ಹಾಗೂ ವಾರ್ಡ್ ಸಂಖ್ಯೆ 10 ಚೇಳಗುಡ್ಡ ಮಾರಮ್ಮ ದೇವಸ್ಥಾನದ ಹತ್ತಿರ ಮ್ಯಾನುಯಲ್ ಸ್ಕಾವೆಂಜರ್‌ಗಳ ಸಮೀಕ್ಷೆ ಶಿಬಿರ ನಡೆಯಲಿದೆ. ಈ ಸ್ಥಳಗಳಲ್ಲಿ ಕಚೇರಿಯಿಂದ ಸಿಬ್ಬಂದಿಗಳನ್ನು ನಿಯೋಜಿಸಿ ಮ್ಯಾನ್ಯುಯಲ್ ಸ್ಕಾವೆಂಜರ್‌ಗಳು ಮತ್ತು ಅವರ ಅವಲಂಬಿತರ ನಿಖರವಾದ ಸಂಖ್ಯೆಯನ್ನು ಗುರುತಿಸುವ ಸಲುವಾಗಿ ಮರು ಸಮೀಕ್ಷೆಯನ್ನು ಕೈಗೊಂಡು ಸ್ವಯಂ ಅರ್ಜಿ ಸಲ್ಲಿಕೆ ಕೇಂದ್ರದಲ್ಲಿ ಸ್ವಯಂ ಘೋಷಣೆ ಮಾಡಿಕೊಳ್ಳಲು ಕೋರಿದೆ. ಅಲ್ಲದೇ ಮ್ಯಾನ್ಯುಯಲ್ ಸ್ಕಾವೆಂಜರ್ ಕ್ಷೇಮಾಭಿವೃದ್ಧಿಗಾಗಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರೇತರ ಸಂಸ್ಥೆಗಳು ಮ್ಯಾನ್ಯುಯಲ್ ಸ್ಕಾವೆಂಜರ್ ಅಸ್ತಿತ್ವದ ಕುರಿತಾಗಿ ವಿವರಗಳನ್ನು ಶಿಬಿರ ನಡೆಯುವ ಸ್ಥಳಗಳಲ್ಲಿ ಹಾಗೂ ನಗರಸಭೆ ಕಚೇರಿಯ ಸ್ವಯಂ ಘೋಷಿತ ಕೇಂದ್ರಗಳಲ್ಲಿ ದಾಖಲು ಮಾಡುವಂತೆ ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ಕೋರಿದ್ದಾರೆ.

### ಶರಣ ಸಂಸ್ಕೃತಿ ಉತ್ಸವ; ಸಂದೇಶ ಪ್ರಸಾರ

» ಚಿತ್ರದುರ್ಗ

ಚಿತ್ರದುರ್ಗ ನಗರದಲ್ಲಿ ಇದೇ ಅ.5 ರಿಂದ 13 ರವರೆಗೆ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳ 150ನೇ ಜಯಂತೋತ್ಸವ ಹಾಗೂ ಶರಣ ಸಂಸ್ಕೃತಿ ಉತ್ಸವ ನಡೆಯಲಿದ್ದು, ರಾಜ್ಯದ ಎಲ್ಲಾ 102.9 ಎಫ್.ಎಂ ಕೇಂದ್ರಗಳಿಂದ ಪ್ರತಿದಿನ ಬೆಳಿಗ್ಗೆ 7.45ಕ್ಕೆ, ವಿವಿಧ ಭಾರತಿ ಬೆಂಗಳೂರು ಕೇಂದ್ರದಿಂದ ಬೆಳಿಗ್ಗೆ 8.10ಕ್ಕೆ ಗಣ್ಯವ್ಯಕ್ತಿಗಳಿಂದ ಸಂದೇಶ ಪ್ರಸಾರ ಮಾಡಲಿದೆ.

ಚಿತ್ರದುರ್ಗ ದಾವಣಗೆರೆ, ಮಧುಗಿರಿ, ತುಮಕೂರು ಜಿಲ್ಲೆಗಳ ಸದಸ್ಯತ್ವ ಅಭಿಯಾನದ ಪರಿಶೀಲನಾ ಸಭೆಯಲ್ಲಿ: ಆರ್.ಅಶೋಕ್ ಹೇಳಿಕೆ

# ಕಾರ್ಯಕರ್ತರೇ ಬಿಜೆಪಿಗೆ ಜೀವಾಳ

» ಚಿತ್ರದುರ್ಗ

ಬಿಜೆಪಿ ಪಕ್ಷಕ್ಕೆ ಕಾರ್ಯಕರ್ತರು, ಸದಸ್ಯರು ಜೀವಾಳವಾಗಿದ್ದಾರೆ, ಈ ಹಿನ್ನಲೆಯಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರು ಪದಾಧಿಕಾರಿಗಳು ಯಾವುದೇ ರೀತಿಯ ಸಬೂಬನ್ನು ಹೇಳದೆ ಅಧ್ಯಕ್ಷರು ನಿಗಧಿಪಡಿಸಿದ ಗುರಿಯನ್ನು ಸಾಧಿಸುವಂತೆ ವಿಪಕ್ಷ ನಾಯಕ ಆರ್ ಅಶೋಕ್ ಸೂಚನೆ ನೀಡಿದರು.



ಚಿತ್ರದುರ್ಗ ನಗರದ ಜಗಲೂರು ಮಹಾಲಿಂಗಪ್ಪ ಕಂಪರ್ಟ್ಸ್‌ನಲ್ಲಿ ನಡೆದ ದಾವಣಗೆರೆ ವಿಭಾಗದ ಚಿತ್ರದುರ್ಗ ದಾವಣಗೆರೆ, ಮಧುಗಿರಿ, ತುಮಕೂರು ಜಿಲ್ಲೆಗಳ ಸದಸ್ಯತ್ವ ಅಭಿಯಾನದ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಪ್ರತಿ ಆರು ವರ್ಷಗಳಿಗೊಮ್ಮೆ ಸದಸ್ಯತ್ವ ಅಭಿಯಾನ ನಡೆಸಲಾಗುತ್ತದೆ. ಕರ್ನಾಟಕ ರಾಜ್ಯವೂ ಸೇರಿದಂತೆ, ರಾಷ್ಟ್ರದಾದ್ಯಂತ ಬಿಜೆಪಿ ಸದಸ್ಯತ್ವ ಅಭಿಯಾನ ಚುರುಕಿನಿಂದ, ಯಶಸ್ವಿಯಾಗಿ ನಡೆಯುತ್ತಿದೆ. ಇಡೀ ವಿಶ್ವದಲ್ಲಿಯೇ ಬಿಜೆಪಿಯು ಅತ್ಯಂತ ಹೆಚ್ಚಿನ ಸದಸ್ಯರನ್ನು ಹೊಂದಿದ ದೊಡ್ಡ ಪಕ್ಷವಾಗಿ ದಾಖಲೆ ಬರೆದಿದೆ. ಕಳೆದ ಬಾರಿ 18 ಕೋಟಿಗಳಷ್ಟಿದ್ದ ಸದಸ್ಯತ್ವ ಸಂಖ್ಯೆಯು ಈ ಬಾರಿ 25 ಕೋಟಿ ತಲುಪುವ ಗುರಿ ಹೊಂದಲಾಗಿದೆ ಎಂದು ಹೇಳಿದ್ದಾರೆ.

ದೇಶ ಕಂಡ ಧೀಮಂತ ಪ್ರಧಾನಿ ನರೇಂದ್ರ ಮೋದಿಯವರ ಸಮರ್ಥ ನಾಯಕತ್ವದಲ್ಲಿ ರಾಷ್ಟ್ರವು ಪ್ರಗತಿ ಪಥದತ್ತ ಯಶಸ್ವಿಯಾಗಿ ಮುನ್ನಡೆದಿದೆ. ಕಳೆದ 10 ವರ್ಷಗಳಲ್ಲಿ ದೇಶವುಅನೇಕರಂಗಗಳಲ್ಲಿಪ್ರಗತಿಸಾಧಿಸಿದೆ. ವಿಶ್ವದ ಐದನೇ ಆರ್ಥಿಕ ಶಕ್ತಿಯಾಗಿ ಭಾರತವು ಮೈದಳಿದಿದ್ದು, ಮುಂದಿನ ಐದು ವರ್ಷಗಳಲ್ಲಿ ಮೂರನೇ ಪ್ರಬಲ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಲಿದೆ. ಪ್ರಧಾನಿ ಮೋದಿಯವರು ಜನರಿಂದ, ಜನರಿಗಾಗಿ, ಜನಪರ ಸರ್ಕಾರ ನೀಡುವಲ್ಲಿ ಯಶಸ್ವಿಯಾಗಿದ್ದಾರೆ. 25 ಕೋಟಿ ಜನರು ಬಡತನ ರೇಖೆ ದಾಟಿ ಈಚೆಗೆ ಬಂದು, ಆರ್ಥಿಕವಾಗಿ ಚೇತನ ಅಂಶಗಳೇ ಹೇಳುತ್ತಿವೆ. ಮೋದಿಯವರ ಸಮರ್ಥ ಸಾಧ್ಯವಾಗಿದೆ. ನಾಯಕತ್ವದಿಂದಾಗಿ ಇದು ಸಾಧ್ಯವಾಗಿದೆ. ಮುಂದಿನ ವರ್ಷಗಳಲ್ಲಿ ದೇಶವು ಇನ್ನೂ ಹೆಚ್ಚಿನ ಅಭೀವೃದ್ಧಿ ಸಾಧಿಸಲಿದೆ ಎಂದರು.

ಕಾಂಗ್ರೆಸ್ ಪಕ್ಷವು ಸಂಪೂರ್ಣವಾಗಿ ಅಭಿವೃದ್ಧಿ ವಿರೋಧಿಯಾಗಿದೆ. ಕಾಂಗ್ರೆಸ್ ಆಡಳಿತದಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿತ್ತು. ಅನೇಕ ಹಗರಣ ಸರಮಾಲೆ ನಡೆದಿದ್ದವು, ಆದರೆ ಮೋದಿ ಸರ್ಕಾರವು 10 ವರ್ಷಗಳಲ್ಲಿ ಯಾವುದೇ ಅವ್ಯವಹಾರ ಭ್ರಷ್ಟಾಚಾರಗಳ ಆರೋಪಗಳಿಲ್ಲದೆ ಪಾರದರ್ಶಕ ಪ್ರಮಾಣಿಕ ಆಡಳಿತ ನೀಡಿದ್ದಾರೆ. ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರು ವಿದೇಶಕ್ಕೆ ತೆರಳಿ ನಮ್ಮ ದೇಶದ ಅಭಿವೃದ್ಧಿ ಕುಂಠಿತಗೊಂಡಿದೆ. ಪ್ರಜಾಪ್ರಭುತ್ವ ಇಲ್ಲ ಎಂದು ಎಂದು ಏನೇನೋ ಮಾತನಾಡುತ್ತಿದ್ದಾರೆ. ಇದು ಅವರಿಗೆ ಶೋಭೆ ತರುವುದಿಲ್ಲ ಎಂದರು.

ಇಂಡಿಯನ್ ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಇದೀಗ ಇಂಡಿಯನ್ ನ್ಯಾಷನಲ್ ಕಮರ್ಷಿಯಲ್ ಕಾಂಗ್ರೆಸ್ ಆಗಿಮಾರ್ಪಟ್ಟಿದೆ ಎಂದು ವ್ಯಂಗ್ಯವಾಡಿದರಲ್ಲದೇ, ಮುಂದೆ ನಡೆಯುವ ವಿವಿಧ ರಾಜ್ಯಗಳ ವಿಧಾನಸಭಾ ಚುನಾವಣೆಗಳಲ್ಲಿ ಕಾಂಗ್ರೆಸ್ ನೆಲ ಕಚ್ಚಲಿದೆ. ದೇಶದ ಪ್ರಜ್ಞಾವಂತ 'ಮತದಾರರು ಕಾಂಗ್ರೆಸ್‌ಗೆ ತಕ್ಕ ಪಾಠ ಕಲಿಸಲಿದ್ದಾರೆ ಹಾಗೂ ಬಿಜೆಪಿಯನ್ನು ಗೆಲ್ಲಿಸಲಿದ್ದಾರೆ ಎಂದು ಅವರು ಕಾಂಗ್ರೆಸ್‌ನವರದ್ದು ತುಷ್ಟಿಕರಣ ರಾಜಕೀಯವಾದರೆ ಬಿಜೆಪಿಯದ್ದು ಸಮಗ್ರ, ಸರ್ವಜನರ ಅಭಿವೃದ್ಧಿಯೇ ಮುಖ್ಯ ಗುರಿಯಾಗಿದೆ. ಕಾಂಗ್ರೆಸ್‌ನವರು ಏನೇ ಮಾಡಿದರೂ, ಕೇಂದ್ರದಲ್ಲಿ ಅಧಿಕಾರಕ್ಕೆ ಬರುವುದಿಲ್ಲ ಎಂದು ಭವಿಷ್ಯ ನುಡಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್, ಚಿದಾನಂದ ಗೌಡ, ಮಾಜಿ ಶಾಸಕರಾದ ತಿಪ್ಪಾರೆಡ್ಡಿ, ಬಿಜೆಪಿ ಸದಸ್ಯತ್ವ ಅಭಿಯಾನದ ಸಂಚಾಲಕರಾದ ನಂದೀಶ್ ರೆಡ್ಡಿ, ದಾವಣಗೆರೆ ಜಿಲ್ಲಾಧ್ಯಕ್ಷರಾದ ರಾಜಶೇಖರ್, ಚಿತ್ರದುರ್ಗ ಜಿಲ್ಲಾಧ್ಯಕ್ಷ ಮುರಳಿ, ಶ್ರೀಮತಿ ಗಾಯತ್ರಿ ಸಿದ್ದೇಶ್ವರ್, ಶಿವಕುಮಾರ್, ನಾಗರಾಜ್ ಲೋಕಿಕೆರೆ, ಕೆ.ಟಿ.ಕುಮಾರಸ್ವಾಮಿ, ಲಿಂಗಮೂರ್ತಿ, ಬಸವರಾಜ ನಾಯ್ಕ್, ಯಶವಂತರಾವ್ ಜಾಧವ್, ವಿರೇಶ್ ಹನಗವಾಡಿ, ಮಧುಗಿರಿ ಬಿಜೆಪಿ ಜಿಲ್ಲಾಧ್ಯಕ್ಷ ಹನುಮಂತೇಗೌಡ, ಮುಖಂಡರಾದ ಲಕ್ಷ್ಮೀಕಾಂತ್, ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್, ಸುರೇಶ್ ಸಿದ್ದಾಪುರ ಉಪಸ್ಥಿತರಿದ್ದರು.

## ವಿವಿಗಳಲ್ಲಿನ ಸಮಸ್ಯೆ ಪರಿಹರಿಸುವಂತೆ ಎಬಿವಿಪಿ ಆಗ್ರಹ

» ಚಿತ್ರದುರ್ಗ

ಕರ್ನಾಟಕ ರಾಜ್ಯದ ವಿಶ್ವವಿದ್ಯಾಲಯಗಳಲ್ಲಿನ ಶೈಕ್ಷಣಿಕ ಹಾಗೂ ಮೂಲಭೂತ ಸೌಕರ್ಯಗಳನ್ನು ಒಳಗೊಂಡ ಸಮಸ್ಯೆಗಳನ್ನು ಪರಿಹರಿಸುವಂತೆ ಆಗ್ರಹಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಪ್ರತಿಭಟನೆಯನ್ನು ನಡೆಸಿ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.



ಕರ್ನಾಟಕ ರಾಜ್ಯದಲ್ಲಿನ ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಹಾಗೂ ವಿಶ್ವವಿದ್ಯಾಲಯ ವ್ಯಾಪ್ತಿಯಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸಮರ್ಪಕ ಬೋಧಕ ವರ್ಗವಿಲ್ಲದೆ ವಿದ್ಯಾರ್ಥಿಗಳ ಪಾಲಿಗೆ ಮೌಲ್ಯಯುತ ಶಿಕ್ಷಣವೆಂಬುದು ಮಸುಕಾಗಿದೆ. ರಾಜ್ಯದಲ್ಲಿನ 460ಕ್ಕೂ ಹೆಚ್ಚಿನ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾಯಂ ಉಪನ್ಯಾಸಕರ ವ್ಯಾಪಕ ಕೊರತೆ ಇರುವುದು, ಇದರ ಪರಿಣಾಮ ವಿದ್ಯಾರ್ಥಿಗಳಿಗೆ ಸಮರ್ಪಕ ತರಗತಿ ನಡೆಯದಿರುವುದು ಕಳೆದ ಹಲವಾರು ವರ್ಷಗಳಿಂದ ಇರುವ ಗಂಭೀರ ಸಮಸ್ಯೆಯಾಗಿದೆ. ಈ ಸಮಸ್ಯೆಗೆ ಪರಿಹಾರವಾಗಿ ಕಾಯಂ ಉಪನ್ಯಾಸಕರ ಬದಲು ಸರ್ಕಾರ ಪ್ರತಿ ವರ್ಷ ಅತಿಥಿ ಉಪನ್ಯಾಸಕರ ನೇಮಕಾತಿ ಮಾಡಿ ಸಮಾಧಾನ ಪಟ್ಟಿಕೊಳ್ಳುತ್ತಿತ್ತು. ಆದರೆ ಅತಿಥಿ ಉಪನ್ಯಾಸಕರ ನೇಮಕದಲ್ಲಿಯೂ ಕೂಡ ವಿಳಂಬ ನೀತಿ ಅನುಸರಿಸುವುದು ನಡೆದು ಬಂದಂತಹ ಪ್ರತೀತಿಯಂತೆ ಇತ್ತೀಚೆಗೆ ನೇಮಕಾತಿ ಆದೇಶ ಹೊರ ಬಿದ್ದಿದೆ.


ಪುಟ 2


## ಬೆಳಗಳಿಗೆ ಬೆಂಬಲ ಬೆಲೆ, ಖರೀದಿ ಕೇಂದ್ರಕ್ಕೆ ರೈತ ಸಂಘ ಒತ್ತಾಯ



» ಪರಶುರಾಂಪುರ

ರೈತರ ಬೆಳೆಗೆ ನಿಗಧಿತ ಬೆಲೆ ಜತೆ ಖರೀದಿ ಕೇಂದ್ರಗಳನ್ನ ತೆರೆಯುವಂತೆ ಶುಕ್ರವಾರ ಅನ್ನದಾತ ಅಖಂಡ ಕರ್ನಾಟಕ ರಾಜ್ಯ ರೈತ ಸಂಘದ ಪದಾಧಿಕಾರಿಗಳು ಒತ್ತಾಯಿಸಿದರು.ಗ್ರಾಮದ ಚೆನ್ನಕೇಶವ ದೇವಾಲಯ ಆವರಣದಲ್ಲಿ ರೈತ ಸಂಘದ ಪದಾಧಿಕಾರಿಗಳು ಆಯೋಜಿಸಿದ್ದ ತುರ್ತು ಸಭೆಯಲ್ಲಿ ಸಂಬಂಧಿಸಿದವರನ್ನ ಆಗ್ರಹಿಸಿದರು.


ಪುಟ 2


ಪ್ರಮುಖ ಸುದ್ದಿ

# ದೇವಿ ಪುರಾಣ, ವಾಚನ ಕೇಳುವುದರಿಂದ ಚಿಂತೆ ದೂರ

» ಚಿತ್ರದುರ್ಗ

ದೇವಿ ಪುರಾಣವನ್ನು ಕೇಳುವುದರಿಂದ, ವಾಚನ ಮಾಡುವುದರಿಂದ, ಆಲಿಸುವುದರಿಂದ ನಮ್ಮಲ್ಲಿನ ಚಿಂತೆಯನ್ನು ದೂರ ಮಾಡುವ ಚಿಂತಾಮಣೆಯಾಗಿದೆ ಎಂದು ಸಾಹಿತಿ ಹುರುಳಿ ಎಂ.ಬಸವರಾಜು ತಿಳಿಸಿದರು.



ಚಿತ್ರದುರ್ಗ ನಗರದ ಕಬೀರಾನಂದ ನಗರದಲ್ಲಿನ ಶ್ರೀ ಸದ್ಗುರು ಕಬೀರಾನಂದಾಶ್ರಮದ ಶ್ರೀ ಭಗವತಿ ಬಗಳಾಂಬಿ ಕಾದೇವಿ ದೇವಸ್ಥಾನದಲ್ಲಿ ಸಂಜೆಯಿಂದ ವಿಜಯದಶಮಿಯವರೆಗೆ ಹಮ್ಮಿಕೊಂಡಿದ್ದ ಶರನ್ನವರಾತ್ರಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ನಮ್ಮಲ್ಲಿ ವಿವಿಧವಾದ ಹಬ್ಬಗಳಿಗೆ ಇದನ್ನು ನಮ್ಮ ಪೂರ್ವಜರು ಮಾಡಿದ್ದಾರೆ. ಇದನ್ನು ಮಾಡುವುದರಿಂದ ನಮ್ಮ ಮನೆ ಹಾಗೂ ಮನಗಳು ಶುದ್ದವಾಗಿ ಇರಲೆಂದು ಮಾಡಿದ್ದಾರೆ. ಕಾಲ ಕಾಲಕ್ಕೆ ಮಾನವರಾದ ನಾವುಗಳು ಮನೆಯನ್ನು ಶುಚಿ ಮಾಡಲಿ ಅದೇ ರೀತಿ ಭಗವಂತನ ನಾಮ ಸ್ಮರಣೆಯನ್ನು ಮಾಡುವುದರ ಮೂಲಕ ನಮ್ಮ ಮನವನ್ನು ಸಹಾ ಶುಚಿಯಾಗಿ ಇಟ್ಟುಕೊಳ್ಳಲೆಂದು ಈ ರೀತಿ ಹಬ್ಬಗಳ ನೆಪದಲ್ಲಿ ಇದನ್ನು ಮಾಡಿದ್ದಾರೆ ಎಂದರು.

ಹಿಂದೂ ಧರ್ಮದಲ್ಲಿ ಹಬ್ಬಗಳಿಗೆ ಕೊರತೆ ಇಲ್ಲ ಪ್ರತಿ ದಿನವೂ ಸಹಾ ಹಬ್ಬವಾಗಿದೆ. ಇದನ್ನು ಮಾಡುವುದರಿಂದ ನಮ್ಮ ಮನಗಳು ಶುದ್ದವಾಗುವಂತೆ ಮಾಡಿದ್ದಾರೆ. ಈ ಹಬ್ಬಗಳ ನೆಪದಲ್ಲಿ ಬಂಧುಗಳ ಬಳಗದವರು ಸೇರಿಕೊಳ್ಳುವ ರೀತಿಯಲ್ಲಿ ಮಾಡಿದ್ದಾರೆ.

ಹಿಂದಿನ ಕಾಲದಲ್ಲಿ ಈ ಜಾಗ ಕರುವಿನ ಕಟ್ಟೆ ಎಂದು ಪ್ರಸಿದ್ದಿಯಾಗಿತ್ತು ಆದರೆ ಈಗ ಇದು ಕರುವಿನ ಕಟ್ಟೆಯಾಗಿ ಎಲ್ಲರಿಗೂ ಅರಿವನ್ನು ನೀಡುವಂತ ಕಟ್ಟೆಯಾಗಿದೆ. ಕಬೀರಾನಂದ ಆಶ್ರಮವೂ ಶಿವರಾತ್ರಿ ಮಹೋತ್ಸವದಡಿಯಲ್ಲಿ ಏಳು ದಿನಗಳ ಕಾಲ ವಿವಿಧ ವಿದ್ವಾಂಸರಿಂದ ಪಂಡಿತರಿಂದ ಸಾಹಿತಿಗಳಿಂದ ಜ್ಞಾನದ ದಾಸೋಹವನ್ನು ನೀಡು ತ್ತಾರೆ ಅದೇ ರೀತಿ ಈ ನವರಾತ್ರಿಯ 10 ದಿನಗಳ ಕಾಲ ದೇವಿಯ ಪುರಾಣವನ್ನು ವಾಚನ ಮಾಡಿಸುವುದರ ಮೂಲಕ ಭಕ್ತಾಧಿಗಳಿಗೆ ದೇವಿಯ ಸ್ಮರಣೆಯನ್ನು ಮಾಡಿಸುತ್ತಾರೆ. ಇದರಿಂದ ಕರುವಿನಕಟ್ಟೆ ಇಂದು ಎಲ್ಲರ ಅರಿವಿನ ಕಟ್ಟೆಯಾಗಿದೆ ಎಂದರು.

ದೇವಿಯೂ ವಿವಿಧೆಡೆಗಳಲ್ಲಿ ವಿವಿಧ ಹೆಸರಿನಿಂದ ಭಕ್ತರಿಂದ ಪೂಜೆಯನ್ನು ಸ್ವೀಕಾರ ಮಾಡುತ್ತಾಳೆ, ಕಾಳಿ, ದುರ್ಗಾ, ಪಾರ್ವತಿ, ದೇವಿ ಹೀಗೆ ವಿವಿಧ ಹೆಸರಿನಲ್ಲಿ ಪೂಜೆಯನ್ನು ಪಡೆಯುವ ದೇವಿಯ ಆರಾಧನೆಯನ್ನು ಈ 9 ದಿನಗಳ ಮಾಡುವುದರ ಮೂಲಕ ತಮ್ಮ ಇಷ್ಟಾರ್ಥಗಳನ್ನು ಪಡೆಯಬಹುದಾಗಿದೆ, ಈ ದೇವಿ ಪುರಾಣವನ್ನು ಪಾರಾಯಣ ಮಾಡುವುದಿಂದ ನಮ್ಮ ಶತೃಗಳು ನಾಶವಾಗುತ್ತಾರೆ ನಮ್ಮಲ್ಲಿನ ಭಯ ದೂರವಾಗುತ್ತದೆ. ಶಾಂತಿ ನೆಮ್ಮದಿ ಮೂಡುತ್ತದೆ. ಇದ್ದಲ್ಲದೆ ವರ್ಷ ಪೂರ್ತಿಯಾಗಿ ಈ ದೇವಿಯ ಪುರಾಣವನ್ನು ವಾಚನ ಮಾಡುವುದರಿಂದ ಮನೆ ಹಾಗೂ ಮನದಲ್ಲಿ ನೆಮ್ಮದಿಯ ವಾತಾವರಣ ಮೂಡುತ್ತದೆ ಎಂದು ಹುರಳಿ ಬಸವರಾಜು ತಿಳಿಸಿದರು.

ಕಾರ್ಯಕ್ರಮದ ಸಾನಿಧ್ಯವನ್ನು ಶ್ರೀ ಸದ್ಗುರು ಕಬೀರಾನಂದಾಶ್ರಮದ ಪೀಠಾಧ್ಯಕ್ಷ ಶ್ರೀ ಶಿವಲಿಂಗಾನಂದ ಶ್ರೀಗಳು ವಹಿಸಿದ್ದರು. ಗೊಲ್ಲರಹಟ್ಟಿಯ ಸಿ ಈರಣ್ಣ ಮಲ್ಲಾಪುರರವರು ದೇವಿಯ ಚರಿತ್ರೆಯನ್ನು ಪಠಿಸಿದರು, ಇವರಿಗೆ ಜಾನಪದ ಕಲಾವಿದರಾದ ಜಿ.ಎನ್.ವಿರೂಪಾಕ್ಷಪ್ಪ ಹಾರ್ಮೋನಿಯಂ ನುಡಿಸಿದರೆ, ಜಿ.ಸಿ.ಯಶವಂತ ತಬಲವನ್ನು ನುಡಿಸಿ ಸಾಥ್ ನೀಡಿದರು.


ಅ. 12ರ ಸಂಜೆ 4 ಗಂಟೆಗೆ ಶ್ರೀ ಮಠದ ಕತೃಗಳಾದ ಶ್ರೀ ಸದ್ಗುರು ಕಬೀರಾನಂದ ಶ್ರೀಗಳ 118ನೇ ವರ್ಷದ ಜಯಂತ್ಯೋತ್ಸವ ಕಾರ್ಯಕ್ರಮ ನಡೆಯಲಿದ್ದು, ಪ್ರತಿ ನಿತ್ಯ ಸಂಜೆ ಸಂಸ್ಕೃತ ಪಾಠಶಾಲೆಯ ಶಿಕ್ಷಕಿಯಾದ ಶ್ರೀಮತಿ ಬಿ.ಕೆ.ಸುಮನರವರಿಂದ ಶ್ರೀ ಲಲಿತಾ ಸಹಸ್ರನಾಮ ಸ್ತೋತ್ರ ನಡೆಯಲಿದ್ದು, ಆ. 7ರ ಸೋಮವಾರ ಬೆಳಿಗ್ಗೆ 07.30 ರಿಂದ 10.30ರವರೆಗೆ ಶ್ರೀ ಸದ್ಗುರು ಕಬೀರಾನಂದಸ್ವಾಮಿ ಸಂಸ್ಕೃತ ಪಾಠಶಾಲೆಯ ಶಿಕ್ಷಕರಾದ ಸುಬ್ರಾಯ ತಿಮ್ಮಣ್ಣ ಭಟ್ಟರಿಂದ ಚಂಡಿಕಾ ಹೋಮ ನಡೆಯಲಿದೆ.

ಅ.12ರ ಸಂಜೆ ಬನ್ನಿ ಮುಡಿಯುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

# ಚಾಮುಂಡೇಶ್ವರಿಗೆ ಕಾಂಗ್ರೆಸ್‌ನಿಂದ ಅವಮಾನ

» **ಚಿತ್ರದುರ್ಗ**

ನಾವಂತು ರಾಜ್ಯ ಕಾಂಗ್ರೆಸ್ ಸರ್ಕಾರ ಬೀಳಿಸಲು ಹೋಗಲ್ಲ. ಪಾಪದ ಕೊಡ ತುಂಬಿ ಅದಾಗೇ ಬೀಳಬೇಕು. ಏಳೆಂಟು ಜನ ಸಚಿವರಿಂದ ಸಿಎಂ ಕುರ್ಚಿಗೆ ಟವಲು ಹಾಕಿದ್ದಾರೆ. ಸಿದ್ದರಾಮಯ್ಯಗೆ ಅವರ ಪಕ್ಷದವರೇ ವಿರೋಧಿಗಳು ಕಾಂಗ್ರೆಸ್‌ನವರಿಂದಲೇ ವಿಪಕ್ಷಕ್ಕೆ ದಾಖಲೆಗಳು ಸಿಗುತ್ತಿವೆ. ಆದರೆ ಕಾಂಗ್ರೆಸ್‌ನವರು ಬಿಜೆಪಿಯಿಂದ ಸರ್ಕಾರ ಅತಂತ್ರ ಯತ್ನ ಆರೋಪ ಮಾಡುತ್ತಿದ್ದಾರೆ ಎಂದು ಎಂದು ವಿಪಕ್ಷ ನಾಯಕ ಆರ್. ಅಶೋಕ್ ಹೇಳಿದ್ದಾರೆ.



ನಗರದಲ್ಲಿಶುಕ್ರವಾರಸುದ್ದಿಗಾರರೊಂದಿಗೆ ಮಾತನಾಡಿ, ಕಾಂಗ್ರೆಸ್‌ನವರು ನನ್ನ ರಾಜೀನಾಮೆ ಕೇಳಿದ್ದರು. ವಿಪಕ್ಷ ನಾಯಕ ಸ್ಥಾನಕ್ಕೆ ರಾಜೀನಾಮೆಗೆ ಸಿದ್ದನಿದ್ದೇನೆ. ನಿನ್ನೆ 24 ಗಂಟೆ ಗಡುವು ನೀಡಿದ್ದೆನು, ಅದೇ ರೀತಿ ಸಿದ್ದರಾಮಯ್ಯರವರ ರಾಜೀನಾಮೆಯನ್ನು ಕಾಂಗ್ರೆಸ್ ಪಕ್ಷದವರು ಪಡೆಯುವ ಧೈರ್ಯ ತೋರಿಸಲಿ ಎಂದು ಸವಾಲೆಸೆದರು.

ಕಾಂಗ್ರೆಸ್ ಸರ್ಕಾರದಿಂದ ತಾಯಿ ಚಾಮುಂಡೇಶ್ವರಿಗೆ ಅವಮಾನ ಆಗಿದೆ. ಕಾಂಗ್ರೆಸ್ ಸರ್ಕಾರದಿಂದ ಜಗತ್ ಪ್ರಸಿದ್ಧಿ ಪಡೆದಿರುವಂತಹ ಮೈಸೂರು ದಸರಾಕ್ಕೆ ಅವಮಾನ ಮಾಡುತ್ತಿದ್ದಾರೆ. ರಾಜರ ಇತಿಹಾಸ ಹಿನ್ನೆಲೆ ಹೊಂದಿರುವ ಮೈಸೂರು ದಸರಾದ ಬಗ್ಗೆ ಮಾತನಾಡಬೇಕಾಗಿತ್ತು ಆದರೆ ಯಾವ ಒಬ್ಬ ರಾಜಕಾರಣಿ ಕೂಡಗಳು ಕೂಡ ಮೈಸೂರು ದಸರಾದ ಬಗ್ಗೆ ಮಾತನಾಡುತ್ತಿಲ್ಲ ಎಂದು ಗುಡುಗಿದ್ದಾರೆ.

ಈ ಬಾರಿಯ ದಸರಾ ಸಂಪೂರ್ಣವಾಗಿ ರಾಜಕೀಯವಾಗಿದೆ. ಚಾಮುಂಡೇಶ್ವರಿ ತಾಯಿಯ ಆರಾಧನೆ ಪೂಜೆ ಆಗಬೇಕಿದ್ದು ಅದು ಆಗಿಲ್ಲ ಇದು ಸಂಪೂರ್ಣ ರಾಜಕೀಯದ ದಸರಾ ಆಗಿದೆ. ಕಾಂಗ್ರೆಸ್ ನವರು ಕುತಂತ್ರದಿಂದ ರಾಜಕೀಯ ದಸರಾ ಮಾಡುವ ಪರಂಪರೆ ಮಾಡುತ್ತಿದ್ದಾರೆ. ಈ ಬಾರಿ ದಸರಾ ಅಧ್ಯಕ್ಷರು ಸಹ ಕೇಂದ್ರ ಸರ್ಕಾರದ ಬಗ್ಗೆ ಟೀಕೆ ಮಾಡಿದ್ದಾರೆ. ದಸರಾದ ಹಿನ್ನೆಲೆಯನ್ನ ಮರೆತು ಕಾಂಗ್ರೆಸ್ ಸರ್ಕಾರ ದಸರಾ ಚಾಮುಂಡಿಗೆ ಅಪಮಾನ ಮಾಡುತ್ತಿದ್ದು ತಾಯಿ ಚಾಮುಂಡೇಶ್ವರಿ ಇದಕ್ಕೆ ತಕ್ಕ ಶಿಕ್ಷೆ ಕೊಡುತ್ತಾಳೆ ಎಂದು ಹೇಳಿದ್ದಾರೆ.

ದಸರಾ ಆಚರಣೆ ವೇಳೆ ಕೇವಲ ರಾಜಕೀಯ ಭಾಷಣ ಸರ್ಕಾರ ಪತನ, ರಾಜೀನಾಮೆ ಬಗ್ಗೆಯೇ ಭಾಷಣ ದಸರಾ ಉದ್ಘಾಟಿಸಿದ ಸಾಹಿತಿನೋ ಯಾರೋ ಗೊತ್ತಿಲ್ಲ ಅವರೂ ಸಹ ಕೇಂದ್ರದ ವಿರುದ್ಧ ಟೀಕಿಸಿ ಭಾಷಣ ಚಾಮುಂಡಿ ಆರಾಧನೆ, ಮೈಸೂರು ಸಂಸ್ಕೃತಿ ಮರೆತು ರಾಜಕೀಯ ದಸರಾ ಮುಡಾ ಹಗರಣ ರೈಸ್ ಮಾಡದವರು ಯಾರು, ಜ್ಞಾನ ಇರಬೇಕಲ್ಲ ಮುಡಾ ಯಾರ ಅಧಿಕಾರದಲ್ಲಿದೆ, ಮರೀಗೌಡ ಯಾರು? ಎಂದು ಪ್ರಶ್ನಿಸಿದರು. ಸಚಿವ ಭೋಸರಾಜ್ ಹೇಳಿಕೆಗೆ ಆರ್ ಅಶೋಕ್ ಗರಂ ಮುಡಾ ಹಗರಣದ ಸೈಟ್ ಬೆಲೆ 80-90ಲಕ್ಷ ಎಂದೇ ಭಾವಿಸಿದ್ದೆವು ಸಿಎಂ ಹಿಂದೆ ನಿಂತ ವ್ಯಕ್ತಿ ಹೇಳಿದ್ದು ಕೇಳಿ 62 ಕೋಟಿ ಹೇಳಿದ್ದರು ನಿಮ್ಮ ಹಿಂಬಾಲಕರೇ ನಿಮಗೆ ಖೆಡ್ಡಾ ತೋಡಿದ್ದಾರೆ ಸಂಗೊಳ್ಳಿ ರಾಯಣ್ಣಗೆ ಆದ ಸ್ಥಿತಿ ನನಗೂ ಆಗುತ್ತಿದೆ ಎಂದು ಸಿಎಂ ಹೇಳಿದ್ದಾರೆ.

14 ಜನ ಶಾಸಕರಿಗೆ ಆಪರೇಷನ್ ಕಮಲಕ್ಕೆ ಯತ್ನ ಆರೋಪ ಮಾಡಿರುವವರ ಯಾವ ಶಾಸಕರು ಯಾರೆಂದು ಹೇಳಲಿ, ದೂರು ದಾಖಲಿಸಲಿ ಕೊಟ್ಟವನು ಯಾರು ತೆಗೆದುಕೊಂಡವನು ಯಾರು ಹೇಳಲಿ ಎಂದ ಅಶೋಕ್ ಕೇಂದ್ರ ಸಚಿವ ಸ್ಥಾನದ ಉಳುವಿಗಾಗಿ ಹೆಚ್ ಡಿಕೆ ಪಾದಯಾತ್ರೆ ಎಂದು ಡಿಕೆಶಿ ಹೇಳಿಕೆ ವಿಚಾರ ಡಿ ಕೆ ಶಿವಕುಮಾರ್ ಅವರಿಗೆ ಭಯ ಇರಬಹುದು ಎಂದರು.

ಬಿಜೆಪಿ- ಜೆಡಿಎಸ್ ಮೈತ್ರಿ ಲೋಕಸಭೆ ಚುನಾವಣೆ ಫಲಿತಾಂಶ ನೀಡಿದೆ ಕಾಂಗ್ರೆಸ್ ಜೆಡಿಎಸ್ ಮೈತ್ರಿ ವೇಳೆಯ ಫಲಿತಾಂಶವೂ ನಮ್ಮ ಮುಂದಿದೆ ಹೊಟ್ಟೆ ಉರಿಯಿಂದ ಒಂದಷ್ಟು ಜನ ಮಾತಾಡಬಹುದು ಜಿ ಟಿ ದೇವೇಗೌಡ ಸ್ಥಳೀಯ ಶಾಸಕರಾಗಿ ಸಿಎಂ ಬಗ್ಗೆ ಹೊಗಳಿದ್ದಾರೆಪ್ರಧಾನಿ ಮೋದಿ ತೆಲಂಗಾಣಕ್ಕೆ ಹೋದಾಗ ಅಲ್ಲಿನ ಸಿಎಂ ಹಿರಿಯಣ್ಣ ಅಂದಿದ್ದರು ಎಂದರು.

ಜಾತಿ ಗಣತಿ ವರದಿ ಸ್ವೀಕಾರ ಬಗ್ಗೆ ಸಿಎಂ ಹೇಳಿಕೆ ವಿಚಾರ 2013ರಿಂದ ಅಧಿಕಾರದಲ್ಲಿದ್ದಾಗ ಮಾಡಬಹುದಾಗಿತ್ತು ಮಾಡಲಿಲ್ಲ ಕಾಂಗ್ರೆಸ್ ನ ಒಕ್ಕಲಿಗೆ ಸಚಿವರೇ ವಿರೋಧಿಸಿದ್ದಾರೆ ಲಿಂಗಾಯತ ಶಾಸಕರು ಜಾತಿ ಗಣತಿ ವಿರೋಧಿಸಿದ್ದಾರೆ ಬಿಜೆಪಿ ಜಾತಿಗಣತಿಯನ್ನು ವಿರೋಧ ಮಾಡೋದಿಲ್ಲಆದರೆವೈಜ್ಞಾನಿಕವಾಗಿ ಜಾತಿ ಗಣತಿ ಆಗಬೇಕು ಅಶೋಕ್ ಸರ್ಕಾರವನ್ನು ಆಗ್ರಹಿಸಿದರು.ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್, ಚಿದಾನಂದ ಗೌಡ, ಮಾಜಿ ಶಾಸಕರಾದ ತಿಪ್ಪಾರೆಡ್ಡಿ, ಮಧುಗಿರಿ ಬಿಜೆಪಿ ಜಿಲ್ಲಾಧ್ಯಕ್ಷ ಹನುಮಂತೇಗೌಡ, ಮುಖಂಡರಾದ ಲಕ್ಷ್ಮೀಕಾಂತ್, ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್, ವಕ್ತಾರ ನಾಗರಾಜ್ ಬೇದ್ರೇ, ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ವಿವಿಗಳಲ್ಲಿನ ಸಮಸ್ಯೆ ಪರಿಹರಿಸುವಂತೆ ಎಬಿವಿಪಿ ಆಗ್ರಹ

» **ಮೊದಲ ಪುಟದಿಂದ**

ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿಯೂ ಕೂಡ ವಿಶ್ವವಿದ್ಯಾಲಯ ವ್ಯಾಪ್ತಿಯಲ್ಲಿ ತರಗತಿಗಳು ಶುರುವಾಗಿ 50 ದಿನಗಳು ಕಳೆದ ನಂತರ ನೇಮಕಾತಿ ಮಾಡಿರುವುದು ಸರ್ಕಾರ, ಉನ್ನತ ಶಿಕ್ಷಣ ಇಲಾಖೆ ಹಾಗೂ ಕಾಲೇಜು ಶಿಕ್ಷಣ ಇಲಾಖೆಯ ಕಾರ್ಯ ವೈಖರಿಗೆ ಹಿಡಿದ ಕೈಗನ್ನಡಿಯಂತಿದೆ. ರಾಜ್ಯದ ವಿದ್ಯಾರ್ಥಿಗಳ ಸಮಯ ಹಾಗೂ ತರಗತಿಗಳ ನಷ್ಟಕ್ಕೆ ಹೊಣೆಯಾರು? ಆದ್ದರಿಂದ ಸರ್ಕಾರ ಕಾಯಂ ಉಪನ್ಯಾಸಕರ ನೇಮಕಾತಿಗೆ ಆದ್ಯತೆ ನೀಡಬೇಕೆಂದು ವಿದ್ಯಾರ್ಥಿ ಪರಿಷತ್ ಆಗ್ರಹಿಸುತ್ತದೆ.

UUCMS ತಂತ್ರಾಂಶದ ಬಳಕೆಯಲ್ಲಿ ಉನ್ನತ ಶಿಕ್ಷಣ ಇಲಾಖೆ ಮತ್ತು ವಿಶ್ವವಿದ್ಯಾಲಯಗಳ ನಡುವೆ ಸಮನ್ವಯದ ಜೊತೆಗೆತಾಂತ್ರಿಕ ಪ 'ರಿಣಿತರಕೊರತೆಯಿಂದಾಗಿತಂತ್ರಾಂಶದ ಸುಲಭ ಬಳಕೆ ಅಸಾಧ್ಯವಾಗಿದೆ ಆದ್ದರಿಂದ ಅಧಿಕಾರಿಗಳು ಸಮಜಾಯಿಷಿ ನೀಡಿ ಹೊಣೆಗಾರಿಕೆಯಿಂದ ನುಣಚಿಕೊಳ್ಳದೆ ಜವಾಬ್ದಾರಿಯುತವಾಗಿ ಸಮಸ್ಯೆಗಳ ಪರಿಹಾರಕ್ಕೆ ಒತ್ತು ನೀಡಬೇಕಿದೆ. ಪದವಿ ಹಾಗೂ ಸ್ನಾತಕೋತರ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ನೀಡುವ ವಿಚಾರದ ಕುರಿತಾಗಿ ಸರ್ಕಾರ ಹಾಗೂ ವಿಶ್ವವಿದ್ಯಾಲಯಗಳು ಸ್ಪಷ್ಟ ನಿಲುವಿನ ತೆಗೆದುಕೊಳ್ಳಬೇಕೆಂದು ಹಾಗೂ ವಿದ್ಯಾರ್ಥಿಗಳಿಗೆ ಉಂಟಾಗುವ ಇನ್ನಿತರ ತಾಂತ್ರಿಕ ಸಮಸ್ಯೆಗಳಿಗೆ ಪರಿಹಾರವನ್ನು ಕಂಡುಕೊಳ್ಳಬೇಕು. ಅದರೊಂದಿಗೆ ಖಾಯಂ ಉಪನ್ಯಾಸಕರ ನೇಮಕಾತಿಗೆ ಅತಿ ಹೆಚ್ಚಿನಆದ್ಯತೆ ನೀಡಿ ಸರ್ಕಾರಿ ಕಾಲೇಜುಗಳಲ್ಲಿನ ಮೌಲ್ಯಯುತ ಶಿಕ್ಷಣದ ಕೊರತೆಯನ್ನು ನೀಗಿಸಲು ಸರ್ಕಾರ ಪ್ರಾಮಾಣಿಕ ಪ್ರಯತ್ನವನ್ನು ಮಾಡಿ, ಶೈಕ್ಷಣಿಕ ಕ್ಷೇತ್ರದಲ್ಲಿನ ಸರ್ವಾಂಗೀಣ ಅಭಿವೃದ್ಧಿಗೆತನ್ನ ಬದ್ಧತೆಯನ್ನು ಖಚಿತಪಡಿಸಬೇಕು. ಕರ್ನಾಟಕದ ಸಾಂಪ್ರದಾಯಿಕ ಪದವಿ ನೀಡುವ ವಿಶ್ವವಿದ್ಯಾಲಯಗಳಲ್ಲಿ ಉಪನ್ಯಾಸಕರ 'ಕೊರತ 'ಅಷ್ಟೇ ಅಲ್ಲದೆ ಅನುದಾನ ಸಮಸ್ಯೆ, ಮೂಲಭೂತ ಸೌಕರ್ಯಗಳ ಸಮಸ್ಯೆ ,ಪೀಠೋಪಕರಣಗಳ ಕೊರತೆ, ಪ್ರಾಯೋಗಿಕ ಉಪಕರಣಗಳ ಕೊರತೆ ಹೀಗೆ ಸಾಲು ಸಾಲು ಸಮಸ್ಯೆಗಳು ಇವೆ, ಒಂದು ವೇಳೆ ಸರ್ಕಾರ ಈ ಸಮಸ್ಯೆಗಳ ಗಂಭೀರತೆಯನ್ನು ಪರಿಗಣಿಸದೆ ಹೋದಲ್ಲಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ರಾಜ್ಯಾದ್ಯಂತ ತೀವ್ರ ಹೋರಾಟವನ್ನು ಹಮ್ಮಿಕೊಳ್ಳುವ ಎಚ್ಚರಿಕೆಯನ್ನು ನೀಡುತ್ತದೆ.ಈ ಸಂದರ್ಭದಲ್ಲಿ ವಿಭಾಗ ಸಹ ಸಂಚಾಲಕರಾದ ಗೋಪಿ, ನಗರ ಸಹ ಕಾರ್ಯದರ್ಶಿ ಸಂಜಯ್, ಅಧ್ಯಯನ ವೃತ್ತ ಪ್ರಮುಖ್ ರಾಜು ಹೊನ್ನಮರಡಿ, ಎಸ್‌ಎಫ್‌ಎಸ್ ಪ್ರಮುಖ್ ಮಧು, ಸಾಮಾಜಿಕ ಜಾಲತಾಣ ಪ್ರಮುಖ್ ಆದರ್ಶ್, ಕಾರ್ಯಕರ್ತರಾದ ಪ್ರೀತಮ್, ಮಣಿಕಂಠ, ಚರಣ, ಚಂದ್ರಕಲಾ, ಕಾರ್ತಿಕ್, ಚಿತ್ರಸ್ವಾಮಿ ಇನ್ನು ಮುಂತಾದ ಕಾರ್ಯಕರ್ತರು ಭಾಗವಹಿಸಿದ್ದರು.

### ಬೆಳಗಳಿಗೆ ಬೆಂಬಲ ಬೆಲೆ, ಖರೀದಿ ಕೇಂದ್ರಕ್ಕೆ ರೈತ ಸಂಘ ಒತ್ತಾಯ

» **ಮೊದಲ ಪುಟದಿಂದ**

ಈ ವೇಳೆಯಲ್ಲಿ ಸಂಘದ ತಾಲೂಕಾಧ್ಯಕ್ಷ ಚಿಕ್ಕಣ್ಣ ಮಾತನಾಡಿ,ರೈತರು ಬೆಳೆದ ಬೆಳೆಗೆ ಬೆಲೆ ಹಾಗೂ ಬೆಂಬಲ ಬೆಲೆಯು ಇಲ್ಲವಾಗಿದೆ.ಅದೇ ರೈತರು ಖರೀದಿಸುವ ವಸ್ತುಗಳಿಗೆ ಬೆಲೆ ನಿಗದಿ ಮಾಡಿ ಕುಳಿತಿರುತ್ತಾರೆ.ಇಂದು ಅಡುಗೆ ಎಣ್ಣೆ ಬೆಲೆ ಗಗನಕ್ಕೆ ಹೋಗಿದೆ ಆದರೆ ಅದೇ ಶೇಂಗಾ ದರ ಕುಸಿತ ಕಂಡಿದೆ.ಆಗೆ ಮೆಕ್ಕೆ ಜೋಳ ಬೆಲೆಯು ಕಡಿಮೆ ಆಗಿದೆ.ಅತಿ-ಅನಾವೃಷ್ಟಿಯಿಂದ ರೈತರು ನಷ್ಟ ಅನುಭವಿಸುವಂತಾಗಿದೆ.ಇದಕ್ಕೆ ಸಂಬಂಧಿಸಿದ ಸರ್ಕಾರದ ಇಲಾಖೆಗಳ ಜತೆ ಅಧಿಕಾರಿಗಳು ರೈತರನ್ನ ಒಳಗೊಂಡಂತೆ ತುರ್ತಾಗಿ ಸಭೆಯಲ್ಲಿ ತಿರ್ಮಾನಿಸಿ ರೈತರ ನೆರವಿಗೆ ಧಾವಿಸಬೇಕು ಎಂದು ಮನವಿ ಮಾಡಿದರು. ಇಲ್ಲವಾದಲ್ಲಿ ಸಾವಿರಾರು ರೈತರೊಂದಿಗೆ ಪ್ರಮುಖ ವೃತ್ತ ಹಾಗೂ ಹೆದ್ದಾರಿಗಳ ಟೋಲ್ ಗಳಲ್ಲಿ ರೈತರು ಬೆಳೆದ ಬೆಳೆಗಳು ಮಾರುಕಟ್ಟೆಗೆ ಹೋಗದಂತೆ ಮುತ್ತಿಗೆ ಹಾಕಲಾಗುವುದು ಎಂದು ತಿರ್ಮಾನಿಸಿದರು. ತಾಲೂಕು ಕಾರ್ಯದರ್ಶಿ ಚೌಳೂರು ಪ್ರಕಾಶ್ ಮಾತನಾಡಿ, ಬಯಲು ಸೀಮೆಯ ರೈತರು ಹೆಚ್ಚಾಗಿ ಬರಗಾಲಕ್ಕೆ ಒಳಗಾಗಿ ನಷ್ಟವನ್ನು ಅನುಭವಿಸುವುದರ ಜತೆ ಪ್ರತಿ ಸಲಾ ಸಾಲ ಹೆಚ್ಚಾಗುತ್ತಾ ಹೋಗುತ್ತೇ ವಿನಃ ನೆಮ್ಮದಿ ಇಲ್ಲವಾಗಿದೆ. ಕಷ್ಟದಲ್ಲಿದ್ದಾಗಲೂ ಇಲಾಖೆಗಳ ನಿಗಧಿತ ಬೆಲೆಗೆ ಬಿತ್ತನೆ ಬೀಜ ಬಿತ್ತನೆ ಮಾಡಿದ್ದಾರೆ.ಆದರೆ ಅತಿ ಹಾಗೂ ಅನಾವೃಷ್ಟಿ ಇಲ್ಲವೇ ಬರಗಾಲದಿಂದ ಕೈ ಸುಟ್ಟುಕೊಂಡು ನೋವು ಅನುಭವಿಸುತ್ತಿದ್ದಾರೆ.ಹೀಗಾಗಿವ 'ಕ್ಕೆಜೋಳ ದರ 3000, ಶೇಂಗಾ ದರ 9500 ರೂಪಾಯಿಗಳನ್ನ ಅತಿ ಶೀಘ್ರದಲ್ಲಿ ದರ ನಿಗದಿ ಮಾಡುವಂತೆ ನಿಗದಿಗೊಳಿಸಲು ಸರ್ಕಾರವನ್ನು ಒತ್ತಾಯ ಹಾಗೂ ಚಳ್ಳಕೆರೆ ತಾಲೂಕಿನಲ್ಲಿ ಖರೀದಿ ಕೇಂದ್ರವನ್ನು ತೆರೆಯಲು ರೈತ ಸಂಘ ಒತ್ತಾಯಿಸಿದರು. ಸಂಘದ ಮುಖಂಡ ಖಾದರ್ ಭಾಷಾ ಮಾತನಾಡಿ,ರೈತರೇ ದೇಶದ ಬೆನ್ನೆಲುಬು ಎಂದು ಬಾಯಲ್ಲಿ ಹೇಳುತ್ತಾರೆ.ಆ ಬೆನ್ನೆಲುಬು ಮುರಿಯಲು ನಮ್ಮನ್ನಾಳುವ ಸರ್ಕಾರಗಳೇ ಪಣ ತೊಡುತ್ತವೆ.ಸರಕಾರಗಳು ರೈತರು ಬೆಳೆದ ಬೆಳೆಗಳಿಗೆ ಬೆಲೆ ಜತೆ ಖರೀದಿ ಕೇಂದ್ರ ತೆರೆಯಲು ಕ್ರಮ ಕೈಗೊಳ್ಳಬೇಕು ಎಂದರು.ಪ್ರಗತಿಪರ ರೈತ ರಾಜಣ್ಣ ಮಾತನಾಡಿದರು. ತಾಲೂಕು ಅಧ್ಯಕ್ಷ ಚಿಕ್ಕಣ್ಣ, ಉಪಾಧ್ಯಕ್ಷ ತಿಮ್ಮಣ್ಣ ,ಹೋಬಳಿ ಘಟಕದ ಕೊಂಡ್ಲಿ ಪರಮೇಶ್ವರಪ್ಪ , ಕಾರ್ಯಧ್ಯಕ್ಷ ಹನುಮಂತರಾಯಪ್ಪ, ಕಾರ್ಯದರ್ಶಿ ಎಚ್. ಪ್ರಕಾಶ್, ನಾಗೇಂದ್ರಪ್ಪ, ಖಾದರ್ ಭಾಷ ,ಕರೆ ತಿಪ್ಪ ರಾಜಣ್ಣ , ವೃಷಭೇಂದ್ರಪ್ಪ , ರಾಜಣ್ಣ , ಸೀನಪ್ಪ , ಶಿವಪ್ಪ , ಹನುಮಂತರಾಯ ಉಪಸ್ಥಿತರಿದ್ದರು.

# ಒಳ ಮೀಸಲಾತಿಗಾಗಿ ಹಿರಿಯೂರಿನ ಪಟ್ರೆಹಳ್ಳಿಯಿಂದ ಡಿಸಿ ಕಚೇರಿವರೆಗೆ ಪಾದಯಾತ್ರೆ

» **ಚಿತ್ರದುರ್ಗ**

ಸುಪ್ರೀಂಕೋರ್ಟ್ ತೀರ್ಪಿನ ಅನ್ವಯ ಒಳ ಮೀಸಲಾತಿಯನ್ನು ಅನುಷ್ಠಾನಗೊಳಿಸಿ ಸಾಮಾಜಿಕ ನ್ಯಾಯವನ್ನು ಎತ್ತಿಹಿಡಿಯದಿದ್ದರೆ ರಾಜ್ಯದ ಮುಖ್ಯಮಂತ್ರಿ ನಿವಾಸಕ್ಕೆ ಪಾದಯಾತ್ರೆ ಹೊರಡುವುದಾಗಿ ಮಾದಿಗ ಮುಖಂಡ ಪಾವಗಡ ಶ್ರೀರಾಮ್ ಎಚ್ಚರಿಸಿದರು.



ಹಿರಿಯೂರು ತಾಲ್ಲೂಕು ಸಮಿತಿ ದಲಿತಪರ ಸಂಘಟನೆಗಳ ಒಕ್ಕೂಟ ಪಟ್ರೆಹಳ್ಳಿಯಿಂದ ಜಿಲ್ಲಾಧಿಕಾರಿ ಕಚೇರಿಗೆ ಶುಕ್ರವಾರ ಆಗಮಿಸಿದ ಪಾದಯಾತ್ರೆಯನ್ನುದ್ದೇಶಿಸಿ ಮಾತನಾಡಿದ ಪಾವಗಡ ಶ್ರೀರಾಮ್ ಮೂವತ್ತು ವರ್ಷಗಳಿಂದಲೂ ಎಲ್ಲಾ ಪಕ್ಷಗಳು ಮಾದಿಗರಿಗೆ ಮೋಸ ಮಾಡಿಕೊಂಡು ಬರುತ್ತಿವೆ. ಒಳ ಮೀಸಲಾತಿಯನ್ನು ಜಾರಿಗೊಳಿಸುವತನಕ ನಮ್ಮ ಹೋರಾಟ ನಿಲ್ಲುವುದಿಲ್ಲ. ಎಲ್ಲಾ ಪಕ್ಷಗಳು ಮಾದಿಗರನ್ನು ಕೇವಲ ರಾಜಕೀಯಕ್ಕಾಗಿ ಬಳಸಿಕೊಳ್ಳುತ್ತಿವೆ. ಈಗಿನ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಾಮಾಜಿಕ ನ್ಯಾಯದ ಬಗ್ಗೆ ಮಾತನಾಡುವ ಬದಲು ಪರಿಶಿಷ್ಟ ಜಾತಿಯಲ್ಲಿನ ಎಲ್ಲಾ ಉಪ ಜಾತಿಗಳ ಮೇಲೆ ನಿಜವಾಗಿಯೂ ಕಾಳಜಿಯಿದ್ದರೆ ಮೊದಲು ಒಳ ಮೀಸಲಾತಿಯನ್ನು ಜಾರಿಗೊಳಿಸಿ ದಲಿತ ವಿರೋಧಿಯಲ್ಲಎನ್ನುವುದನ್ನುಸಾಬೀತುಪಡಿಸಲಿ ಎಂದು ಸವಾಲು ಹಾಕಿದರು.

ಹಿರಿಯೂರು ತಾಲ್ಲೂಕಿನ ಕೋಡಿಹಳ್ಳಿ ಮಠದಿಂದ 2003 ರಲ್ಲಿ ಒಳ ಮೀಸಲಾತಿಗಾಗಿ ಮೊದಲು ಪಾದಯಾತ್ರೆ ಆರಂಭವಾಯಿತು. ಒಳ ಮೀಸಲಾತಿ ಜಾರಿಗೊಳಿಸದಿದ್ದರೆ ಪರಿಶಿಷ್ಟ ಜಾತಿಯಲ್ಲಿ 101 ಉಪ ಜಾತಿಗಳು ಒಗ್ಗಟ್ಟಾಗಿ ಹೋರಾಟ ಮಾಡುತ್ತೇವೆ. ನಮ್ಮ ನಮ್ಮಲ್ಲೆ ಒಡಕು ಮೂಡಿಸುವ ದುರಾಲೋಚನೆಯಿಟ್ಟುಕೊಂಡಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಲ್ಲಿಕಾರ್ಜುನಖರ್ಗೆಯವರ ಕಡೆ ಕೈತೋರಿಸುತ್ತಿರುವುದು ಯಾವ ನ್ಯಾಯ? ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಮೀಸಲಾತಿಯನ್ನು ಕೊಟ್ಟಿದ್ದರೂ ಸಮಪಾಲು ಹಂಚಿಕೆಯಾಗಿಲ್ಲ. ದಲಿತರನ್ನು ಕೇವಲ ಮತ ಬ್ಯಾಂಕನ್ನಾಗಿ ಬಳಸಿಕೊಳ್ಳುವುದನ್ನು ಬಿಟ್ಟು ಒಳ ಮೀಸಲಾತಿ ಜಾರಿಗೊಳಿಸಿ. ಇಲ್ಲವಾದಲ್ಲಿ ಕುರ್ಚಿ ಖಾಲಿ ಮಾಡಿ ಎಂದು ಪಾವಗಡ ಶ್ರೀರಾಮ್ ಮುಖ್ಯಮಂತ್ರಿಗೆ ಗಡುವು ನೀಡಿದರು.

ಸಾಮಾಜಿಕನ್ಯಾಯ,ಭದ್ರತೆಬಗ್ಗೆಮಾತನಾಡುವ ಮುಖ್ಯಮಂತ್ರಿ ಸಿದ್ದರಾಮಯ್ಯನವರೆ ದಲಿತ ವಿರೋಧಿ ಎನ್ನುವ ಕಳಂಕ ಅಂಟಿಸಿಕೊಳ್ಳಬೇಡಿ. ಸುಪ್ರೀಂಕೋರ್ಟ್ ತೀರ್ಪಿನನ್ವಯ ಮೊದಲು ಒಳ ಮೀಸಲಾತಿ ಜಾರಿಗೊಳಿಸಿ. ಇಲ್ಲವಾದಲ್ಲಿ ನಿಮ್ಮ ನಿವಾಸಕ್ಕೂ ಮುತ್ತಿಗೆ ಹಾಕುತ್ತೇವೆಂದು ಬೆದರಿಕೆ ಹಾಕಿದರು.

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಬಿ.ಪಿ.ಪ್ರಕಾಶ್‌ಮೂರ್ತಿ, ಗುರುಸ್ವಾಮಿ, ಹುಲ್ಲೂರುಕುಮಾರಸ್ವಾಮಿ, ಹರಿರಾಮ್, ಲಕ್ಷ್ಮಿ, ಕೋಡಿಹಳ್ಳಿ ಸಂತೋಷ್, ಕೆ.ಟಿ.ಶಿವಕುಮಾರ್ ಸೇರಿದಂತೆ ನೂರಾರು ಮಾದಿಗರು ಪಾದಯಾತ್ರೆಯಲ್ಲಿ ಪಾಲ್ಗೊಂಡಿದ್ದರು.

### ಆಸ್ಪತ್ರೆಯ ರೋಗಿಗಳಿಗೆ ಬ್ರೆಡ್, ಹಣ್ಣು, ಹಾಲು ವಿತರಿಸುವ ಮೂಲಕ ಸರಳವಾಗಿ ಹುಟ್ಟುಹಬ್ಬ ಆಚರಣೆ



» **ಚಳ್ಳಕೆರೆ**

ಕರ್ನಾಟಕ ರಾಜಕೀಯ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷ ತನ್ನದೇಯಾದ ವಿಶೇಷತೆಯನ್ನು ಹೊಂದಿದ್ದು, ಚಿತ್ರದುರ್ಗ ಜಿಲ್ಲೆಯ ಹೆಮ್ಮೆಯ ರಾಜಕಾರಣಿ, ರಾಜ್ಯ ದಲಿತ ಸಮುದಾಯದ ಹಿರಿಯ ಮುಖಂಡ ದಿವಂಗತ ಎಚ್.ರಂಗನಾಥರವರ ಸಂಬಂಧಿ, ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಎಸ್.ವಿಜಯಕುಮಾರ್‌ರವರ ಜನ್ಮದಿನಾಚರಣೆಯನ್ನು ಅಭಿಮಾನಿಗಳು ಹಾಗೂ ಬಂಧುಗಳು ಸಾರ್ವಜನಿಕ ಆಸ್ಪತ್ರೆ ರೋಗಿಗಳಿಗೆ ಬ್ರೆಡ್, ಹಣ್ಣು, ಹಾಲು ವಿತರಿಸುವ ಮೂಲಕ ಸರಳವಾಗಿ ಆಚರಿಸಿದರು. ಕಾಂಗ್ರೆಸ್ ಹಿರಿಯ ಮುಖಂಡ, ಮಾಜಿ ತಾಲ್ಲೂಕು ಪಂಚಾಯಿತಿ ಸದಸ್ಯ ಸಿ.ಟಿ.ಶ್ರೀನಿವಾಸ್, ಕೆಪಿಸಿಸಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜಿ.ಎಚ್. ಮೋಹನ್ ಮಾತನಾಡಿದರು.

ಕೆಪಿಸಿಸಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜಿ.ಎಚ್.ಮೋಹನ್ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರಾದ ಡಿ.ಕೆ.ಕಾಟಯ್ಯ, ವೃತ್ತಪರ ಉಪಾಧ್ಯಕ್ಷ ಬಿ.ಎ.ಪರಮೇಶ್ವರಪ್ಪ, ಐಎನ್‌ಟಿಯುಸಿ ಜಿಲ್ಲಾ ಉಪಾಧ್ಯಕ್ಷ ಟಿ.ಕೆಂಚಣ್ಣ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ.ದೇವರಾಜ್, ವಕೀಲ ಡಿ.ಆರ್.ರವೀಂದ್ರ, ನಿವೃತ್ತ ಶಿಕ್ಷಕ ತಿಪ್ಪೇಸ್ವಾಮಿ, ಭೀಮಣ್ಣ, ರಾಮಕೃಷ್ಣ, ಮೂಡಲಗಿರಿಯಪ್ಪ ಮುಂತಾದವರು ಉಪಸ್ಥಿತರಿದ್ದರು.

### ತಾಲ್ಲೂಕು ಮಟ್ಟದ ಕ್ರೀಡಾಕೂಟದಲ್ಲಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು

» **ಚಳ್ಳಕೆರೆ**

ನಗರದ ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ತಾಲ್ಲೂಕು ಮಟ್ಟದ ವಿವಿಧ ಕ್ರೀಡೆಗಳು ಆಯೋಜಿದ್ದು ನಗರ ಹಾಗೂ ಗ್ರಾಮಾಂತರ ಪ್ರದೇಶದ ವಿದ್ಯಾರ್ಥಿಗಳು ಪಂದ್ಯಗಳಲ್ಲಿ ಗೆಲುವು ಸಾಧಿಸುವ ಮೂಲಕ ಎಲ್ಲರ ಅಭಿಮಾನಕ್ಕೆ ಪಾತ್ರರಾಗಿದ್ದಾರೆ.

ನಗರದ ಇನ್‌ಫೆಂಟ್ ಜೀಸಸ್ ಶಾಲೆಯ ವಿದ್ಯಾರ್ಥಿನಿ ಆರ್.ನೂತನ್ ಎತ್ತರ ಜಿಗಿತ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನಗಳಿಸಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದ್ದಾಳೆ. ವಿದ್ಯಾರ್ಥಿನಿಯ ಸಾಧನೆಗೆ ವ್ಯವಸ್ಥಾಪಕ ಫಾದರ್ ರಿಚರ್ಡ್ ಅನಿಲ್ ಡಿಸೋಜ, ದೈಹಿಕ ಶಿಕ್ಷಕ ವಿಲ್ಸನ್‌ಫೆರ್ನಾಂಡಿಸ್ ಮೆಚ್ಚುಗೆ ವ್ಯಕ್ತಪಡಿಸಿ, ಅಭಿನಂದಿಸಿದ್ದಾರೆ.





ಬಸಾಪುರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿನಿ ಎ.ದೀಕ್ಷಿತ ಗುಂಡುಎಸೆತದಲ್ಲಿ ದ್ವಿತೀಯ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾಳೆ. ಶಾಲೆಯ ಮುಖ್ಯ ಶಿಕ್ಷಕಿ ಬಿ.ಕವಿತಾ, ಶಿಕ್ಷಕರಾದ ಜೆ.ರಾಜು, ಟಿ.ಸಿರಿಯಣ್ಣ, ಎಸ್‌ಡಿಎಂಸಿ ಅಧ್ಯಕ್ಷ ನಾಗರಾಜು, ಉಪಾಧ್ಯಕ್ಷೆ ಚೆನ್ನಮ್ಮ, ಡಿ.ಏಸು, ತುಪ್ಪದಮ್ಮ ಸಂತಸ ವ್ಯಕ್ತಪಡಿಸಿದ್ದಾರೆ.

### ನವೋದಯ ಶಾಲೆ ಪ್ರವೇಶ: ಅರ್ಜಿ

» **ಚಿತ್ರದುರ್ಗ**

ಹಿರಿಯೂರು ತಾಲ್ಲೂಕು ಉಡುವಳ್ಳಿ ಜವಾಹರ್ ನವೋದಯ ವಿದ್ಯಾಲಯದಲ್ಲಿ 2025-26ನೇ ಸಾಲಿಗೆ 6ನೇ ತರಗತಿಯ ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸಲು ಅ.07 ಕಡೆಯ ದಿನವಾಗಿದೆ. ಆಸಕ್ತ ಅಭ್ಯರ್ಥಿಗಳು ಅರ್ಜಿಯನ್ನು ಉಚಿತವಾಗಿ ನವೋದಯ ವಿದ್ಯಾಲಯ ಸಮಿತಿಯ ವೆಬ್ ಸೈಟ್ https://cbseitms.rcil.gov.in/nvs/Index/Registration ಮೂಲಕ ಸಲ್ಲಿಸಬಹುದು ಎಂದು ಪ್ರಾಂಶುಪಾಲ ಡೇನಿಯಲ್ ರತನ್‌ಕುಮಾರ್ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ಜನರಿಗೆ ಉತ್ತಮ ಆರೋಗ್ಯ ಸೇವೆ ನೀಡಿ; ಜಿ.ಪಂ ಸಿಇಒ

» **ಚಿತ್ರದುರ್ಗ**

ಜಿಲ್ಲೆಯ ಜನರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್ ಹೇಳಿದರು.




ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ಕಾವೇರಿ ಆಸ್ಪತ್ರೆ ವತಿಯಿಂದ ಸಮುದಾಯ ಆರೋಗ್ಯ ಅಧಿಕಾರಿಗಳಿಗೆ ತುರ್ತು ಚಿಕಿತ್ಸೆ, ಸ್ಟ್ರೋಕ್, ಸಿಪಿಆರ್ ಬಗ್ಗೆ ಒಂದು ದಿನದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯು ಬರಗಾಲ ಪ್ರದೇಶ ಮತ್ತು ಅತೀ ಹೆಚ್ಚು ಎಸ್. ಸಿ ಮತ್ತು ಎಸ್. ಟಿ ಹಾಗೂ ಹಿಂದುಳಿದ ವರ್ಗಗಳಿರುವ ಪ್ರಯುಕ್ತ ಅವರನ್ನು ಅಲೆದಾಡಿಸದೇ, ಗೌರವಯುತವಾಗಿಕಂಡು,ಒಳ್ಳೆಮಾತನಾಡಿ ಅವರಿಗೆ ಪ್ರಾಮಾಣಿಕವಾಗಿ ಆರೋಗ್ಯ ಸೇವೆಯನ್ನು ಒದಗಿಸಿ ಕೊಡುವುದು ಸಮುದಾಯ ಆರೋಗ್ಯ ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಗ್ರಾಮೀಣ ಭಾಗದಲ್ಲಿ ಹಾವು, ನಾಯಿ ಮತ್ತು ಬೇರೆ ಬೇರೆ ಪ್ರಾಣಿಗಳ ಕಡಿತ, ಅಲರ್ಜಿ, ಅಲರ್ಜಿಯಿಂದಾದ ಕಾಯಿಲೆಗಳು, ಅಪಘಾತಗಳು, ಪಾರ್ಶ್ವವಾಯು, ಮೆದುಳಿನ ಜೀವಕೋಶಗಳಿಗೆ ಹಾನಿಯುಂಟಾದಾಗ ಉದ್ಭವಿಸುವ ದೈಹಿಕ ತೊಂದರೆ. ಇದರ ಸಾಮಾನ್ಯ ಲಕ್ಷಣಗಳೆಂದರೆ ಅಂಗಾಂಗಗಳ ಸ್ವಾಧೀನ ತಪ್ಪುವಿಕೆ. ಸಮತೋಲನ, ಮಾತು ಮತ್ತು ದೃಷ್ಟಿ ಸಾಮರ್ಥ್ಯಗಳು ಮಂಕಾಗುವುದು ಅಥವಾ ಪೂರ್ತಿ ಇಲ್ಲದಂತಾಗುವುದು ಮತ್ತು ಹೃದಯಕ್ಕೆ ಸಂಬಂಧಿಸಿದ ಕಾಯಿಲೆಗಳಲ್ಲಿ ಎದೆ ನೋವು, ಎದೆಯ ಬಿಗಿತ, ಎದೆಯ ಒತ್ತಡ ಮತ್ತು ಎದೆಯ ಅಸ್ವಸ್ಥತೆ, ಉಸಿರಾಟದ ತೊಂದರೆ, ದೇಹದ ಆ ಭಾಗಗಳಲ್ಲಿ ರಕ್ತನಾಳಗಳು ಕಿರಿದಾಗಿದ್ದರೆ ಕಾಲುಗಳು ಅಥವಾ ತೋಳುಗಳಲ್ಲಿ ನೋವು, ಮರಗಟ್ಟುವಿಕೆ, ದೌರ್ಬಲ್ಯ ಅಥವಾ ಶೀತ, ಕುತ್ತಿಗೆ, ದವಡೆ, ಗಂಟಲು, ಮೇಲಿನ ಹೊಟ್ಟೆ ಅಥವಾ ಬೆನ್ನಿನಲ್ಲಿ ನೋವು ಇನ್ನೂ ಅನೇಕ ವಿವಿಧ ಕಾಯಿಲೆಗಳ ಬಗ್ಗೆ ಹಾಗೂ ತುರ್ತು ಚಿಕಿತ್ಸೆಗಳಲ್ಲಿ ಎಚ್ಚರ ವಹಿಸಿ ಆರೋಗ್ಯ ನೀಡುವ ಬಗ್ಗೆ ಈ ತರಬೇತಿ ಕಾರ್ಯಗಾರದಲ್ಲಿ ತರಬೇತಿದಾರರು ವಿವರವಾಗಿ ತಿಳಿಸಿ ಕೊಡಲಿದ್ದಾರೆ. ಈ ತರಬೇತಿ ಪಡೆದ ನಂತರ ತಾವುಗಳು ಸಮುದಾಯದ ಜನರಿಗೆ ಉತ್ತಮ ಆರೋಗ್ಯ ನೀಡುವುದು ನಿಮ್ಮಗಳ ಕರ್ತವ್ಯ ಎಂದು ಕಿವಿ ಮಾತು ಹೇಳಿದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಚಂದ್ರಶೇಖರ್ ಕಂಬಾಳಿ ಮಠ, ಬೆಂಗಳೂರು ಕಾವೇರಿ ಆಸ್ಪತ್ರೆಯ ಮುಖ್ಯಸ್ಥರಾದ ಡಾ. ಸುರೇಂದ್ರ ಸಂಪತ್, ನ್ಯೂರೋಲಾಜಿಸ್ಟ್ ಡಾ. ಹೆಚ್. ಸಂತೋಷ್ ಮತ್ತು ಸಮುದಾಯ ಆರೋಗ್ಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಹೊಸದುರ್ಗ ಇಂದು ಮತ್ತು ನಾಳೆ ವಿದ್ಯುತ್ ವ್ಯತ್ಯಯ

» ಹೊಸದುರ್ಗ

ರಸ್ತೆ ಅಗಲೀಕರಣ ಮತ್ತು ಒಳಚರಂಡಿ ನಿರ್ವಹಣಾ ಕಾಮಗಾರಿ ನಿರ್ವಹಿಸುವುದರಿಂದ ಇಂದು ಮತ್ತು ನಾಳೆ ಅಂದರೆ ಆ..5ರಂದು ಶನಿವಾರ ಮತ್ತು ಆ.6 ರಂದು ಭಾನುವಾರ ಬೆಳಿಗ್ಗೆ 10 ರಿಂದ ಸಂಜೆ 6 ವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಪಟ್ಟಣದ ಸಿದ್ಧರಾಮನಗರ, ರಾಘವೇಂದ್ರ ಬಡಾವಣೆ, ಶಿವಲಿಂಗಪ್ಪ ಬಡಾವಣೆ, ಸಿದ್ದೇಶ್ವರ ಬಡಾವಣೆ, ಇಂಡಸ್ಟ್ರಿಯಲ್ ಬಡಾವಣೆ, ಕನಕ ಬಡಾವಣೆ, ಯಾಲಕಪ್ಪನಹಟ್ಟಿ, ಶಿವನೇಕಟ್ಟೆ ಗ್ರಾಮ, ಕಂಗುವಳ್ಳಿ ಮತ್ತು ಬೋಕಿಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಬೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಡ್ಡರ್ಸೆ ರಘುರಾಮ ಶೆಟ್ಟಿ ಸಾಮಾಜಿಕ ನ್ಯಾಯ ಪತ್ರಿಕೋದ್ಯಮ ಪ್ರಶಸ್ತಿಗೆ ನಾಮನಿರ್ದೇಶನಗಳ ಅಹ್ವಾನ

» ಚಿತ್ರದುರ್ಗ

ಹಿರಿಯ ಪತ್ರಕರ್ತ ದಿ.ವಡ್ಡರ್ಸೆ ರಘುರಾಮ ಶೆಟ್ಟಿ ಅವರ ನೆನಪಿನಾರ್ಥ ಸಾಮಾಜಿಕ ನ್ಯಾಯ ಪತ್ರಿಕೋದ್ಯಮ ಪ್ರಶಸ್ತಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2024–25ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದ್ದಾರೆ. ಪ್ರಶಸ್ತಿಯು 2 ಲಕ್ಷ ರೂಪಾಯಿ ನಗದು, ಸ್ಮರಣಿಕೆ ಒಳಗೊಂಡಿದೆ."ವಡ್ಡರ್ಸೆ ರಘುರಾಮ ಶೆಟ್ಟಿ" ಸಾಮಾಜಿಕ ನ್ಯಾಯ ಪತ್ರಿಕೋದ್ಯಮ ಪ್ರಶಸ್ತಿಗೆ ಅರ್ಹರನ್ನು ಆಯ್ಕೆ ಮಾಡಲು ಪತ್ರಕರ್ತರಿಂದ ಅರ್ಜಿ ಆಹ್ವಾನಿಸಲಾಗಿದೆ ಹಾಗೂ ಸಾರ್ವಜನಿಕರು, ಸಂಘ – ಸಂಸ್ಥೆಗಳು ಅರ್ಹ ಪತ್ರಕರ್ತರನ್ನು ಪ್ರಶಸ್ತಿಗೆ ನಾಮನಿರ್ದೇಶನ ಮಾಡಬಹುದಾಗಿದೆ.ವಡ್ಡರ್ಸೆ ರಘುರಾಮಶೆಟ್ಟಿ ಅವರ ಪರಿಚಯ:ಓದುಗರ ಸಂಪಾದಕ ಎಂದೇ ಹೆಸರಾಗಿದ್ದ ದಿ.ವಡ್ಡರ್ಸೆ ರಘುರಾಮ ಶೆಟ್ಟಿಯವರು. 1960ರ ದಶಕದಿಂದ ಸುಮಾರು ನಾಲ್ಕು ದಶಕಗಳ ಕಾಲ ಕನ್ನಡ ಪತ್ರಿಕೋದ್ಯಮದಲ್ಲಿ ಮಹತ್ವದ ಸೇವೆಗೈದಿದ್ದಾರೆ. ಮಾಧ್ಯಮವು ವಾಣಿಜ್ಯೋದ್ಯಮಿಗಳ ಹಾಗೂ ಈ ರಂಗದ ಪರಿಚಯವಿಲ್ಲದವರ ಆಡುಂಬೊಲವಾಗಬಾರದು ಎಂಬ ಮಹತ್ವಾಕಾಂಕ್ಷೆ ಹೊಂದಿದ್ದರು. ಸಮಾಜದ ವಂಚನೆಯ ಜಾಲಗಳನ್ನು ಬಯಲಿಗೆಳೆಯುವ ಉದ್ದೇಶದಿಂದ 1984 ರಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಿಂದ "ಮುಂಗಾರು" ದಿನಪತ್ರಿಕೆಯನ್ನು ಪ್ರಾರಂಭಿಸಿ, ನಿರ್ಭೀತ ಬರಹಗಳ ಮೂಲಕ ಪತ್ರಿಕಾ ವೃತ್ತಿಯಲ್ಲಿ ಬದಲಾವಣೆಯನ್ನು ತಂದವರು. ಕನ್ನಡ ಪತ್ರಿಕೋದ್ಯಮದಲ್ಲಿ ದೀನದಲಿತರ ಹಾಗೂ ದುರ್ಬಲ ವರ್ಗದವರ ಪರವಾಗಿ ಧ್ವನಿಯೆತ್ತುವ, ದನಿಯಿಲ್ಲದವರ ದನಿಯಾಗಿದ್ದರು. ಪಾರದರ್ಶಕ ಮತ್ತು ಜವಾಬ್ದಾರಿಯುತ ಆಡಳಿತವನ್ನು ಉತ್ತೇಜಿಸಲು ಮತ್ತು ಸಾಮಾಜಿಕ ಬದಲಾವಣೆಯನ್ನು ತರಲು ಶ್ರಮಿಸಿದರು.ಪ್ರಶಸ್ತಿಗೆ ಅರ್ಹತೆಗಳು: ಮುದ್ರಣ ಅಥವಾ ವಿದ್ಯುನ್ಮಾನ ಮಾಧ್ಯಮ ಕ್ಷೇತ್ರದಲ್ಲಿ ಕನಿಷ್ಠ 15 ವರ್ಷ ಸೇವಾನುಭವ ಹೊಂದಿರಬೇಕು. ಹಿರಿಯರಿಗೆ ಆದ್ಯತೆ ನೀಡಲಾಗುವುದು. ಸಾಮಾಜಿಕ ನ್ಯಾಯದ ಕಾಳಜಿ ಹೊಂದಿರುವ 10 ರಿಂದ 15 ಲೇಖನಗಳು ಪ್ರಕಟವಾಗಿರಬೇಕು ಅಥವಾ ವಿದ್ಯುನ್ಮಾನ ಮಾಧ್ಯಮಗಳಲ್ಲಿ ಈ ಕುರಿತು ವಿಶೇಷ ವರದಿ, ಚರ್ಚೆ, ಸಂವಾದ ಹಾಗೂ ಇನ್ನಿತರೆ ಕಾರ್ಯಕ್ರಮಗಳನ್ನು ನಿರ್ಮಿಸಿರಬೇಕು. ನಾಮನಿರ್ದೇಶನಗಳನ್ನು ಸಲ್ಲಿಸಲು 2024ನೇ ಅಕ್ಟೋಬರ್ 21 ಕೊನೆಯ ದಿನಾಂಕವಾಗಿರುತ್ತದೆ. ನಾಮನಿರ್ದೇಶನಗಳನ್ನು ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾಸೌಧ, ಭಗವಾನ್ ಮಹಾವೀರ ರಸ್ತೆ, (ಇನ್ ಫೆಂಟ್ರಿ ರಸ್ತೆ), ಬೆಂಗಳೂರು 560 001 ಇಲ್ಲಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಅಥವಾ tsraward@gmail.com ಇ–ಮೇಲ್ ಮೂಲಕ ಸಲ್ಲಿಸಬಹುದಾಗಿದೆ. ಇತರೆ ಜಿಲ್ಲೆಗಳ ಪತ್ರಕರ್ತರು ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧಿಕಾರಿಗಳಿಗೆ ಸಲ್ಲಿಸಬಹುದು ಎಂದು ಇಲಾಖೆಯ ಆಯುಕ್ತರಾದ ಹೇಮಂತ್ ಎಂ. ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಾರ್ಯಾಗಾರ

» ಚಿತ್ರದುರ್ಗ

ಭಾರತೀಯ ವಿಜ್ಞಾನ ಸಂಸ್ಥೆ, ವಿಜ್ಞಾನ ತಂತ್ರಜ್ಞಾನ ಮತ್ತು ನಾವಿನ್ಯತ ಕೇಂದ್ರ (ಎಸ್‌ಟಿಐ ಹಬ್) ಹಾಗೂ ಸೊಸೈಟಿ ಫಾರ್ ಇನ್ನೋವೇಷನ್ ಅಂಡ್ ಡೆವಲಪ್‌ಮೆಂಟ್ (ಎಸ್‌ಐಡಿ), ಸಹಯೋಗದಲ್ಲಿ ಚಳ್ಳಕೆರೆ ತಾಲ್ಲೂಕಿನ ಕುದಾಪುರ ಭಾರತೀಯ ವಿಜ್ಞಾನ ಸಂಸ್ಥಾನ ಆವರಣದಲ್ಲಿ ನವೆಂಬರ್ 4 ರಿಂದ 9 ರವರೆಗೆ ಉದ್ಯಮಶೀಲತೆ ಮತ್ತು ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಗಾರವನ್ನು ಆಯೋಜಿಸಲಾಗಿದೆ. 6 ದಿನಗಳ ತರಬೇತಿಯಲ್ಲಿ ಹೊಸ ಉದ್ಯಮವನ್ನು ಆರಂಭಿಸಲು ಆಸಕ್ತಿ ಇರುವವರಿಗಾಗಿ ಉದ್ಯಮಶೀಲತೆ ಮತ್ತು ಕೌಶಲ್ಯಾಭಿವೃದ್ಧಿ ಕುರಿತು ತರಬೇತಿ ನೀಡಲಾಗುವುದು. 18–45 ವರ್ಷದೊಳಗಿನ ಕನಿಷ್ಠ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆ ಹೊಂದಿರುವ ಆಸಕ್ತ ಅಭ್ಯರ್ಥಿಗಳು ಅ.20ರ ಒಳಗೆ ತಮ್ಮ ಹೆಸರನ್ನು ಗಣೇಶ್ ಮೊ. 8970582703, ಕೋಟೇಶ್ ಮೊ.9743675646 ಗೆ ಕರೆ ಮಾಡಿ ನೊಂದಾಯಿಸಿಕೊಳ್ಳಬಹುದು. ಅ.25ರೊಳಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

---

ಲೋಕಸಭಾ ಸದಸ್ಯರಾದ ಡಾ;ಪ್ರಭಾ ಮಲ್ಲಿಕಾರ್ಜುನ್ ಹೇಳಿಕೆ

# ವಿದ್ಯಾರ್ಥಿಗಳು ಶಿಕ್ಷಣದೊಂದಿಗೆ ಆತ್ಮಸ್ಥೈರ್ಯ ಹೆಚ್ಚಿಸುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು

» ದಾವಣಗೆರೆ

ವಿದ್ಯಾರ್ಥಿಗಳು ಶಿಕ್ಷಣದೊಂದಿಗೆ ಆತ್ಮಸ್ಥೈರ್ಯ ಹೆಚ್ಚಿಸುವಂತಹ ಚಟುವಟಿಕೆಗಳಲ್ಲಿ ಭಾಗವಹಿಸಬೇಕು ಎಂದು ಲೋಕಸಭಾ ಸದಸ್ಯರಾದ ಡಾ; ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಅವರು (ಅ.4) ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಹಾಗೂ ಖಾಸಗಿ ಪದವಿ ಪೂರ್ವ ಕಾಲೇಜು ಆಡಳಿತ ಮಂಡಳಿಗಳ ಸಂಘ, ದಾವಣಗೆರೆ ಇವರುಗಳ ಸಂಯುಕ್ತಾಶ್ರಯದಲ್ಲಿ ವಿದ್ಯಾನಗರದಲ್ಲಿನ ಕುವೆಂಪು ಕನ್ನಡ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ಉಚಿತ ಸಿಇಟಿ ಮತ್ತು ನೀಟ್ ಪರೀಕ್ಷೆ ತರಬೇತಿ ಕಾರ್ಯಕ್ರಮಕ್ಕೆ ಸಸಿಗೆ ನೀರು ಹಾಕುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ತನ್ನ ಭವಿಷ್ಯದ ಗುರಿಯನ್ನಿಟ್ಟುಕೊಂಡು ಆಶಾವಾದಿಗಳಾಗಬೇಕು. ಜೀವನದಲ್ಲಿ ಸಿಗುವಂತಹ ಅವಕಾಶಗಳನ್ನು ಸಂಪೂರ್ಣವಾಗಿ ಸದ್ಬಳಕೆ ಮಾಡಿಕೊಂಡರೆ, ತನ್ನ ಗುರಿ ಸಾಧನೆಯ ಹಾದಿ ಸುಗಮವಾಗುತ್ತದೆ ಎಂದು ಅವರು ತಿಳಿಸಿದರು.

ವಿದ್ಯಾರ್ಥಿಗಳುಶಿಕ್ಷಕರೊಂದಿಗೆ,ಪೋಷಕರೊಂದಿಗೆ ಹಾಗೂ ಸಮಾಜದೊಂದಿಗೆ ಉತ್ತಮ ಭಾಂದವ್ಯವನ್ನು ಬೆಳೆಸಿಕೊಂಡು ಸಂಬಂಧಗಳ ಮಹತ್ವಗಳನ್ನು ಅರಿತು



ಅವುಗಳನ್ನುತಮ್ಮಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಕಲಿಕೆಯ ಎಲ್ಲ ಹಂತಗಳಲ್ಲಿ ತಮ್ಮನ್ನು ತೊಡಗಿಸಿಕೊಂಡಾಗ ಮಾತ್ರ ಪರಿಪೂರ್ಣ ವಿದ್ಯಾರ್ಥಿ ಎಂದು ಎನಿಸಿಕೊಳ್ಳಲು ಸಾಧ್ಯ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಯಾವುದೇ ವಿಷಯಗಳನ್ನು ನಿರ್ಲಕ್ಷ್ಯ ಮಾಡದೇ ಪ್ರತಿಯೊಂದು ವಿಷಯವು ಉಪಯುಕ್ತ ಎನ್ನುವ ಭಾವನೆಯೊಂದಿಗೆ ಕಲಿಕೆಯಲ್ಲಿ ತೊಡಗಿಸಿಕೊಳ್ಳಲು ಯತ್ನಿಸಬೇಕಿದೆ ಎಂದು ತಿಳಿಸಿ ಸ್ಪರ್ಧಾತ್ಮಕ ಯುಗದಲ್ಲಿ ಇಂಗ್ಲಿಷ್ ಕಲಿಕೆ, ಕಂಪ್ಯೂಟರ್ ಜ್ಞಾನದ ಜೊತೆಗೆ ಶಿಸ್ತು ಬೆಳೆಸಿಕೊಂಡರೆ ಮಾತ್ರ ಜೀವನದಲ್ಲಿ ಹೆಚ್ಚಿನ ಸಾಧನೆ ಮಾಡಲು ಸಾಧ್ಯ ಎಂದು ಅವರು ಅಭಿಪ್ರಾಯಪಟ್ಟರು.

ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ ಮಾತನಾಡಿ ವಿದ್ಯಾರ್ಥಿಗಳು ಏನು ಓದಬೇಕು, ಯಾವಾಗ ಓದಬೇಕು, ಏನ್ ಮಾಡಬೇಕು ಎಂಬ ಸ್ವಂತ ಚಿಂತನೆಗಳನ್ನು ರೂಡಿಸಿಕೊಳ್ಳಬೇಕು. ವಿದ್ಯಾರ್ಥಿಗಳ ತಂದೆ, ತಾಯಿಗಳು ಕಷ್ಟಪಟ್ಟು ದುಡಿದು ನಿಮಗೆ ವಿದ್ಯಾಭ್ಯಾಸ ಕಲಿಯಲು ಕಳುಹಿಸುತ್ತಿರುತ್ತಾರೆ. ಅದರ ಫಲವಾಗಿ ನೀವು ಅವರಿಗೆ ನಿಮ್ಮ ಸಾಧನೆಯ ಮೂಲಕ ಗೌರವ ತರಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ. ಇಟ್ನಾಳ್ ಮಾತನಾಡಿ ಈ ತರಬೇತಿಯು 90 ದಿನಗಳ ಕಾಲ ನಡೆಯಲಿದ್ದು. ಪ್ರತಿದಿನ 2 ಗಂಟೆಯಂತೆ ಐದು ದಿನ ತರಗತಿಗಳನ್ನು ನಡೆಸಲಾಗುತ್ತದೆ. ಜೊತೆಗೆ 19 ವರ್ಷ ಹಿಂದಿನ ಪ್ರಶ್ನೋತ್ತರಗಳನ್ನು ಸಿಇಟಿ, ನೀಟ್ ವಿದ್ಯಾರ್ಥಿಗಳಿಗೆ ನೀಡಲಾಗುವುದು ಎಂದು ತಿಳಿಸಿದರು.

ಸರ್ಕಾರಿ ಕಾಲೇಜಿನಲ್ಲಿರುವಂತಹ ಅಧ್ಯಾಪಕರು ಬೋರ್ಡ್ ಪರೀಕ್ಷೆ ಬಗ್ಗೆ ಹೆಚ್ಚು ಅಧ್ಯಯನ ಮಾಡಿಸುತ್ತಾರೆ, ಹಾಗೆಯೇ ಖಾಸಗಿ ಸಂಸ್ಥೆ ಅಧ್ಯಾಪಕರು ಸಿಇಟಿ ಮತ್ತು ನೀಟ್ ಪರೀಕ್ಷೆ ಬಗ್ಗೆ ಉಪನ್ಯಾಸ ನೀಡುತ್ತಾರೆ ಎಂದು ತಿಳಿಸಿದರು.

ಜಿಲ್ಲಾ ಅಧೀಕ್ಷಕರಾದ ಉಮಾ ಪ್ರಶಾಂತ್ ಮಾತನಾಡಿ ಭವಿಷ್ಯ ನಿಮ್ಮ ಕೈಯಲ್ಲಿದೆ, ಆದ್ದರಿಂದ ಕಲಿಯುವ ಸಮಯದಲ್ಲಿ ಗಮನವಿಟ್ಟು ಶ್ರದ್ಧೆಯಿಂದ ಕಲಿತು ಈ ಅವಕಾಶವನ್ನು ಸದುಪಯೋಗ ಮಾಡಿಕೊಳ್ಳಿರಿ ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ಸಿಗರೇಟ್, ತಂಬಾಕು ಇಂತಹ ದುಶ್ಚಟಗಳಿಂದ ದೂರವಿರಬೇಕು, ಕಾಲೇಜುಗಳಲ್ಲಿ ಯಾರಾದರೂ ಸಿಗರೇಟ್, ತಂಬಾಕು ಬಳಸುವುದು ಕಂಡುಬಂದಲ್ಲಿ ಅಂತವರಬಗ್ಗೆಕಾಲೇಜಿನಪ್ರಾಂಶುಪಾಲರಿಗೆ ಮತ್ತು ಪೊಲೀಸರಿಗೆ ಮಾಹಿತಿ ನೀಡಬೇಕು ಎಂದು ತಿಳಿಸಿದರು.

ಇದೆ ವೇಳೆ ಯೂಟ್ಯೂಬ್ ಚಾನೆಲ್ ಗೆ ಚಾಲನೆ ನೀಡಿ ವಿದ್ಯಾರ್ಥಿಗಳಿಗೆ ಸಿಇಟಿ, ನೀಟ್ ಬುಕ್ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆಯ ಮಹಾಪೌರರಾದ ಚಮನ್ ಸಾಬ್ , ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ್, ಪದವಿಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಕರಿಸಿದ್ದಪ್ಪ, ಖಾಸಗಿ ಪದವಿ ಪೂರ್ವ ಕಾಲೇಜು ಆಡಳಿತ ಮಂಡಳಿ ಸಂಘದ ಅಧ್ಯಕ್ಷರಾದ ಶ್ರೀಧರ್, ಕಾರ್ಯದರ್ಶಿ ಡಾ.ಜಯಂತ್, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಬಿ ವಾಮದೇವಪ್ಪ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಗಾಯತ್ರಿ ಹಾಗೂ ವಿವಿಧ ಅಧಿಕಾರಿಗಳು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

---

## ಉಚಿತ ಕಣ್ಣಿನ ಶಸ್ತ್ರ ಚಿಕಿತ್ಸೆ ವೀರೇಂದ್ರ ಪಪ್ಪಿ ಭರವಸೆ

» ಚಿತ್ರದುರ್ಗ

ಬೆಂಗಳೂರಿನ ಶಂಕರ್ ಕಣ್ಣಿನ ಆಸ್ಪತ್ರೆ ಸಹಯೋಗದೊಂದಿಗೆ ಕಣ್ಣಿನ ಶಸ್ತ್ರ ಚಿಕಿತ್ಸೆ ಅವಶ್ಯಕತೆ ಇರುವವರಿಗೆ ಉಚಿತವಾಗಿ ಊಟ, ವಸತಿಯೊಂದಿಗೆ ಶಸ್ತ್ರ ಚಿಕಿತ್ಸೆ ಹಾಗೂ ಔಷಧ ಮತ್ತು ಕನ್ನಡಕ ವಿತರಣೆ ಮಾಡುವುದಾಗಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಭರವಸೆ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಅಂಧತ್ವ ನಿವಾರಣಾ ವಿಭಾಗ ಲಕ್ಷ್ಮಿಸಾಗರ ಗ್ರಾಮ ಪಂಚಾಯಿತಿ ಹಾಗೂ ಬೆಂಗಳೂರಿನ ಶಂಕರ್ ಕಣ್ಣಿನ ಆಸ್ಪತ್ರೆ ಸಹಯೋಗದಲ್ಲಿ ಲಕ್ಷ್ಮಿಸಾಗರ ಗ್ರಾಮದಲ್ಲಿ ಆಯೋಜಿಸಲಾಗದ್ದ ಬೃಹತ್ ಉಚಿತ ಕಣ್ಣಿನ ತಪಾಸಣೆ ಶಸ್ತ್ರ ಚಿಕಿತ್ಸೆ ಹಾಗೂ ಕನ್ನಡಕ ವಿತರಣಾ ಶಿಬಿರ ಉದ್ಘಾಟಿಸಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಮಾತನಾಡಿದರು.

ಕಣ್ಣಿನ ಶಸ್ತ್ರ ಚಿಕಿತ್ಸೆಗೆ ಶಾಸಕರ ಕಾರ್ಯಾಲಯದಿಂದ ವ್ಯವಸ್ಥೆ ಮಾಡಲಾಗುವುದು. ಕಣ್ಣಿನ ಶಸ್ತ್ರಚಿಕಿತ್ಸೆ ಮಾಡಿಸಿ ಸುರಕ್ಷಿತವಾಗಿ ಅವರನ್ನು ಮನೆಗೆ ತಲುಪಿಸುವ ವ್ಯವಸ್ಥೆಯನ್ನು ಮಾಡಲಾಗುವುದು ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಹೇಳಿದರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ರವೀಂದ್ರ ಮಾತನಾಡಿ, ಕಣ್ಣು ಮಹತ್ವದ ಅಂಗವಾಗಿದ್ದು ಇದನ್ನು ರಕ್ಷಿಸುವುದು ನಮ್ಮ ಜವಾಬ್ದಾರಿ. 40 ವರ್ಷ



ಮೇಲ್ಪಟ್ಟ ಪ್ರತಿಯೊಬ್ಬರು ವರ್ಷಕ್ಕೊಮ್ಮೆ ಸಮೀಪದ ಸರ್ಕಾರಿ ಆಸ್ಪತ್ರೆಗಳಲ್ಲಿ ಕಣ್ಣಿನ ತಪಾಸಣೆ ಮಾಡಿಸಿಕೊಂಡು ಕಣ್ಣನ್ನು ರಕ್ಷಿಸಿಕೊಳ್ಳಿರಿ ಎಂದರು.

ಚಲನಚಿತ್ರ ನಟ ದೊಡ್ಡಣ್ಣ ಮಾತನಾಡಿ ಪಂಚೇಂದ್ರಿಯಗಳಲ್ಲಿ ಪವಿತ್ರವಾದ ಅಂಗ ನಯನವಾಗಿದೆ. ನಯನಗಳ ಬಗ್ಗೆ ಎಲ್ಲರಲ್ಲೂ ಕಾಳಜಿ ಇರಬೇಕು. ಸಂಘ ಸಂಸ್ಥೆಗಳ ಮೂಲಕ ಕಾಲ ಕಾಲಕ್ಕೆ ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸಿ ಸಾರ್ವಜನಿಕರ ಆರೋಗ್ಯ ಕಾಪಾಡಲು ಪ್ರಯತ್ನವಾಗಬೇಕು ಎಂದರು.ಶಿಬಿರದಲ್ಲಿ 280 ಜನರ ಕಣ್ಣಿನ ತಪಾಸಣೆ ಮಾಡಿಸಲಾಯಿತು. 51 ಕಣ್ಣಿನಪೊರೆ ಇರುವವರನ್ನು ಗುರುತಿಸಿದ್ದು, ಮುಂದಿನ ದಿನಗಳಲ್ಲಿ ಇವರಗೆ ಬೆಂಗಳೂರಿನಲ್ಲಿ ಶಸ್ತ್ರಚಿಕಿತ್ಸೆ ಮಾಡಲು ನೊಂದಣಿ ಮಾಡಿಕೊಳ್ಳಲಾಯಿತು. 98 ದೃಷ್ಟಿ ದೋಷ ಇರುವವರನ್ನು ಗುರುತಿಸಲಾಗಿದ್ದು ಉಚಿತ ಕನ್ನಡಕ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಕೆಡಿಪಿ ಸದಸ್ಯ ಕೆ.ಸಿ.ನಾಗರಾಜ್, ಗ್ರಾ.ಪಂ. ಅಧ್ಯಕ್ಷೆ ಸರಸ್ವತಿ ಸ್ವಾಮಿ. ಉಪಾಧ್ಯಕ್ಷೆ ಸುನಿತಾ, ಸದಸ್ಯರಾದ ವಸಂತ, ಎ.ಬಿ.ಧನಂಜಯ, ಅಶೋಕ್‌ಕುಮಾರ್, ಸುರೇಶ್, ದೇವರಾಜ್, ಕವಿತಾ, ಅಲಿಖಾನ್, ತಾ.ಪಂ.ಇಓ ರವಿಕುಮಾರ್, ಆರೋಗ್ಯ ಅಧಿಕಾರಿ ಡಾ ಬಿ.ವಿ.ಗಿರೀಶ್, ಶಂಕರ್ ಕಣ್ಣಿನ ಆಸ್ಪತ್ರೆ ವೈದ್ಯರ ತಂಡ ಸೇರಿದಂತೆ ಮತ್ತಿರರು ಇದ್ದರು.

---

## ಕ್ರೈಸ್ ವಸತಿ ಶಾಲೆ ಪ್ರಾಂಶುಪಾಲರಿಗೆ ಕಾರ್ಯಾಗಾರ



» ಚಿತ್ರದುರ್ಗ

ಚಳ್ಳಕೆರೆ ನಗರದ ಬೊಮ್ಮಸಮುದ್ರ ರಸ್ತೆಯ ಕಿತ್ತೂರು ರಾಣಿ ಚೆನ್ನಮ್ಮ (ಎಸ್.ಟಿ) ಶಾಲೆಯಲ್ಲಿ ಜಿಲ್ಲೆಯ ಎಲ್ಲಾ ವಸತಿ ಶಾಲೆಗಳ ಪ್ರಾಂಶುಪಾಲರಿಗೆ ಈಚೆಗೆ ರಾಜ್ಯ ಮಟ್ಟದಲ್ಲಿ ವಸತಿ ಶಾಲಾ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ಕಾರ್ಯಕ್ರಮ ಮೂರು ವರ್ಷಗಳಿಗೆ ಒಡಂಬಡಿಕೆ ಮಾಡಿಕೊಂಡಿರುವ ಬೆಂಗಳೂರಿನ ಅನಾಹತ ಪೌಂಡೇಶನ್ ವತಿಯಿಂದ ಒಂದು ದಿನದ ಕಾರ್ಯಾಗಾರ ಹಮ್ಮಿಕೊಳ್ಳಲಾಯಿತು. ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಮಾತನಾಡಿ, ವಸತಿ ಶಾಲೆಗಳ ವಿದ್ಯಾರ್ಥಿಗಳ ದೃಷ್ಟಿಯಿಂದ ಜಿಲ್ಲೆಯ ಎಲ್ಲ ವಸತಿ ಶಾಲೆಗಳ ಪ್ರಾಂಶುಪಾಲರು ಹಾಗೂ ಅನಾಹತ ಪೌಂಡೇಶನ್ ಸಂಸ್ಥೆ ನಡೆಸಿಕೊಡುವ ಕಾರ್ಯಕ್ರಮವನ್ನು ಯಶ್ವಸಿಯಾಗಿ ಅನುಷ್ಠಾನಗೊಳಿಸುವ ಮೂಲಕ ಮೂಲಕ ಮಕ್ಕಳ ಬಾಳಿಗೆ ಬೆಳಕಾಗಬೇಕು ಎಂದು ತಿಳಿಸದರು.ವಸತಿ ಶಾಲೆಗಳ ಜಿಲ್ಲಾ ಸಮನ್ವಯಾಧಿಕಾರಿ ಟಿ. ಮಂಜಣ್ಣ ಮಾತನಾಡಿ, ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಸಾಂಪ್ರದಾಯಕ ಶಿಕ್ಷಣದ ಜೊತೆಗೆ ವೃತ್ತಿ ಶಿಕ್ಷಣ ನೀಡುತ್ತಿರುವ ಕಾರಣ ಚಿಕ್ಕ ವಯಸ್ಸಿಗೆ ದುಡಿಮೆಯ ದಾರಿಗಳನ್ನು ಕಂಡುಕೊಂಡು ತಂದೆ ತಾಯಿಗಳಿಗೆ ಜೀವನದಲ್ಲಿ ಆಸರೆಯಾಗುತ್ತಾರೆ ಎಂದು ಹೇಳಿದರು.ಇದೇ ಸಂದರ್ಭದಲ್ಲಿ ಬೆಂಗಳೂರಿನ ಅನಾಹತ ಪೌಂಡೇಶನ್ ಸಂಸ್ಥೆ ವತಿಯಿಂದ ಎಲ್ಲಾ ವಸತಿ ಶಾಲೆಗಳ ಪ್ರಾಂಶುಪಾಲರಿಗೆ ಉಚಿತ ಲ್ಯಾಪ್‌ಟಾಪ್‌ಗಳನ್ನು ನೀಡಲಾಯಿತು. ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಅವರು ವಸತಿ ಶಾಲೆ ಪ್ರಾಂಶುಪಾಲರಿಗೆ ಉಚಿತ ಲ್ಯಾಪ್ ಟಾಪ್ ವಿತರಿಸಿದರು. ಕಾರ್ಯಕ್ರಮದಲ್ಲಿ ವಸತಿ ಶಾಲೆಗಳ ಪ್ರಾಂಶುಪಾಲರಾದ ಆರ್.ರಮೇಶ್, ಸಿದ್ದಪ್ಪ, ಮಹೇಶ್ ಅಂಗಡಿ ಸೇರಿದಂತೆ ಬೆಂಗಳೂರಿನ ಅನಾಹತ ಪೌಂಡೇಶನ್ ಸಂಸ್ಥೆಯ ನಿಂಗಪ್ಪ ಮತ್ತು ಸಿದ್ದಲಿಂಗಪ್ಪ ಹಾಗೂ ವಸತಿ ಶಾಲೆಗಳ ವಿದ್ಯಾರ್ಥಿಗಳು ಇದ್ದರು.

---

## ಸ್ವ-ಸಹಾಯ ಗುಂಪು ಸದಸ್ಯರ ನೇಮಕ

ಚಿತ್ರದುರ್ಗ: ಚಿತ್ರದುರ್ಗ ಜಿಲ್ಲೆಯ ಹೊಳಲ್ಕೆರೆ ನಗರ ಸ್ಥಳೀಯ ಸಂಸ್ಥೆಯ ಜೊತೆಗೆ ಪೂರ್ಣಾವಧಿಗೆ ಐಇಸಿ ಚಟುವಟಿಕೆಗಳನ್ನು ಕೈಗೊಳ್ಳಲು ತಮ್ಮ ಆಸಕ್ತಿಯನ್ನು ವ್ಯಕ್ತಪಡಿಸಲು ಓಗಒಐ–ಜಚಿಥಿ ಅಡಿಯಲ್ಲಿ ನೊಂದಾಯಿತ SHG ಸದಸ್ಯರಿಂದ ಆಸಕ್ತಿಯ ಅಭಿವ್ಯಕ್ತಿಯನ್ನು ಆಹ್ವಾನಿಸಲಾಗಿದೆ. ಆಯ್ಕೆ ಪ್ರಕ್ರಿಯೆ ಮತ್ತು ವೇತನಕ್ಕೆ ಸಂಬಂಧಿಸಿದ ವಿವರ www.holalkeretown.mrc.gov.in ನಲ್ಲಿ ವೀಕ್ಷಿಸಬಹುದು. NUML-day ನೊಂದಿಗೆ ನೊಂದಾಯಿಸಿಕೊಂಡ ಆಸಕ್ತ ಸದಸ್ಯರು ತಮ್ಮ ಆಸಕ್ತಿಯ ಅಭಿವ್ಯಕ್ತಿಯನ್ನು NUML-day ಯ ಹಿಂಬರಹದೊಂದಿಗೆ ಅಕ್ಟೋಬರ್ 5ರ ಸಂಜೆ 5 ಗಂಟೆಯೊಳಗೆ ಕಚೇರಿಯ ಅಧಿಕೃತ ಇಮೇಲ್ ka.holalakere.tmc@gmail.com ಗೆ ಕಳುಹಿಸಲು ತಿಳಿಸಲಾಗಿದೆ. ಆಸಕ್ತಿಯುಳ್ಳ SHG ಸದಸ್ಯರು ಗುರುತಿನ ಪುರಾವೆ, ವಿಳಾಸದ ಪುರಾವೆ, ಅರ್ಹಾತಾ ಪಟ್ಟಿಯಲ್ಲಿ ನೊಂದಾಯಿಸಕೊಂಡಿರುವುದಕ್ಕೆ (ಎಂಪಾನೆಲ್) ದಾಖಲೆಗಳು, ಶೈಕ್ಷಣಿಕ ಅರ್ಹತೆ, NUML-day ನಿಂದ ಹಿಂಬರಹ ನಮೂನೆಯ ದಾಖಲೆಗಳನ್ನು ಸಲ್ಲುಸಬೇಕು.

---

**ಪ್ರಮುಖ ಸುದ್ದಿ**

ಸಿರಿಗೆರೆಯಲ್ಲಿ ತಜ್ಞರ ಸಮಾಲೋಚನಾ ಸಭೆ

# ಬರಪೀಡಿತ ಪ್ರದೇಶಗಳ ಅಭಿವೃದ್ಧಿಗೆ ಏತನೀರಾವರಿ ಅಗತ್ಯ

» ನಮ್ಮಜನ ಸಮಾಚಾರ

ಸಿರಿಗೆರೆ: ಮಧ್ಯ ಕರ್ನಾಟಕದ ಬರ ಪೀಡಿತ ಪ್ರದೇಶಗಳ ಅಭಿವೃದ್ಧಿಗೆ ಏತ ನೀರಾವರಿ ಯೋಜನೆಗಳು ಅನಿವಾರ್ಯ ಮತ್ತು ಅಗತ್ಯವಾಗಿವೆ ಎಂದು ಬೆಂಗಳೂರಿನ ಕೃಷಿ ತಂತ್ರಜ್ಞಾನ ಅಳವಡಿಕೆ ಸಂಶೋಧನಾ ಕೇಂದ್ರದ ನಿರ್ದೇಶಕ ವೆಂಕಟ ಸುಬ್ರಹ್ಮಣ್ಯಂ ಹೇಳಿದರು.

ಸಿರಿಗೆರೆ ಸಮೀಪದ ಶಾಂತಿವನದಲ್ಲಿ ಜಾಗತಿಕ ಹವಾಮಾನ ನಿಯಂತ್ರಣದ ಕ್ಲಿಷ್ಟ ಸಮಸ್ಯೆಗಳಿಗೆ ಪರಿಹಾರಗಳು ಕುರಿತಂತೆ ನಡೆದ ಸಮಾಲೋಚನಾ ಸಭೆಯಲ್ಲಿ ಅವರು ಮಾತನಾಡಿದರು.

ರಾಜ್ಯದಲ್ಲಿ ತುಂಗಾಭದ್ರ ನದಿ ಸುಮಾರು 382 ಕಿ.ಮೀ. ದೂರವನ್ನು ಕ್ರಮಿಸುತ್ತಿದೆ. ಈ ನದಿಯ ಎರಡೂ ದಂಡೆಗಳ ಪ್ರದೇಶಗಳು ಇವತ್ತಿಗೂ ಬಹುತೇಕ ಬರ ಪ್ರದೇಶವಾಗಿವೆ. ನದಿಯಲ್ಲಿ ಹರಿಯುವ ನೀರನ್ನು ಬಳಸಿಕೊಂಡು ಆಯಾಯ ಭಾಗದ ಕೆರೆಗಳನ್ನು ಏತನೀರಾವರಿ ಮೂಲಕ ತುಂಬಿಸುವ ಕೆಲಸ ತ್ವರಿತವಾಗಿ ಆದರೆ ಸುಸ್ಥಿರ ಕೃಷಿ ಸಾಧ್ಯವಿದೆ. ಅಂತಹ



ಕೆಲಸವನ್ನು ಮಧ್ಯ ಕರ್ನಾಟಕದಲ್ಲಿ ತರಳಬಾಳು ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿ ಮುಂದಾಳತ್ವದಲ್ಲಿ ಆಗುತ್ತಿದೆ ಎಂದರು.


ದೊಡ್ಡ ಅಣೆಕಟ್ಟುಗಳನ್ನು ಕಟ್ಟುವುದು ಎಲ್ಲಾ ಸಮಸ್ಯೆಗಳಿಗೆ ಪರಿಹಾರವಲ್ಲ. ನದಿಗಳುಹಾದುಹೋಗುವಪ್ರದೇಶಗಳಲ್ಲಿನ ಕೆರೆಗಳನ್ನು ತುಂಬಿಸಬೇಕು. ಇದರಿಂದ ನದಿಗಳಲ್ಲಿನ ಪ್ರವಾಹ ಮಟ್ಟವನ್ನು ತಗ್ಗಿಸುವುದು, ಅಂತರ್ಜಲ ಮಟ್ಟವನ್ನು ವೃದ್ಧಿಸುವುದು, ಆಯಾಯಾ ಭಾಗದ ಜನರ ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆಗೆ ಕಾರಣವಾಗುತ್ತದೆ. ಇದು ಮುಂದೆ ಈಗ ಎದುರಿಸುತ್ತಿರುವ ಜಾಗತಿಕ ಹವಾಮಾನ ಬದಲಾವಣೆಯಂತಹ ಕ್ಲಿಷ್ಟ ಸಮಸ್ಯೆಗಳಿಗೆ ಪರಿಹಾರವಾಗುತ್ತದೆ ಎಂದರು.

ತರಳಬಾಳು ಜಗದ್ಗುರು ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳವರು ಮಾತನಾಡಿ, ದೊಡ್ಡ ಡ್ಯಾಂಗಳ ನಿರ್ಮಾಣದಿಂದ ಪರಿಸರ ಹಾನಿ, ಮಿತಿಮೀರಿದ ವೆಚ್ಚ, ಡ್ಯಾಂಗಳಲ್ಲಿ ಊಳು ತುಂಬುವುದರಿಂದ ನೀರಿನ ಸಂಗ್ರಹ ಪ್ರಮಾಣ ಕಡಿಮೆ ಆಗುವ ಅಂಶಗಳನ್ನು ಬಗ್ಗೆ ಮಾತನಾಡಿದರು.

ತರಳಬಾಳು ಕೃಷಿ ಕೇಂದ್ರದ ನಿರ್ದೇಶಕ ಹಾಗೂ ರಾಜ್ಯ ಯೋಜನಾ ಆಯೋಗದ ಮಾಜಿ ಸದಸ್ಯ ಕೆ.ಪಿ. ಬಸವರಾಜ್ ಮಾತನಾಡಿ ಶ್ರೀಗಳ ನೇತೃತ್ವದಲ್ಲಿ ಜಾರಿಯಾಗುತ್ತಿರುವ ಏತ ನೀರಾವರಿ ಯೋಜನೆಗಳು ಮಾದರಿಯಾಗಿವೆ. ಜೊತೆಗೆ ತರಳಬಾಳು ಕೃಷಿ ವಿಜ್ಞಾನ ಕೇಂದ್ರದ ಆಶ್ರಯದಲ್ಲಿ 3 ಜಿಲ್ಲೆಗಳಲ್ಲಿ ಆರಂಭವಾಗಿರುವ 17 ರೈತ ಉತ್ಪಾದಕ ಸಂಘಗಳನ್ನು ಸದೃಢಗೊಳಿಸಿ ರೈತರಿಗೆ ಬೇಕಾಗಿರುವ ಬೀಜ, ಗೊಬ್ಬರ, ಕೀಟನಾಶಕಗಳು ಮತ್ತು ಇತರೆ ಪರಿಕರಗಳು ಹಾಗೂ ರೈತರು ಬೆಳೆದ ಬೆಳೆಗಳಿಗೆ ಮಾರುಕಟ್ಟೆ ವ್ಯವಸ್ಥೆಯನ್ನು ಕಲ್ಪಿಸಿ ಕೊಟ್ಟಿರುವುದು ಮಾದರಿಯಾಗಿದೆ ಎಂದರು. ತರಳಬಾಳು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ. ಟಿ.ಎನ್. ದೇವರಾಜ್ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಎಡಿಜಿಪಿ ಚಂದ್ರಶೇಖರ್ ಅಮಾನತುಗೊಳಿಸಿ



» **ಹೊಸದುರ್ಗ**

ಭ್ರಷ್ಟಾಚಾರ, ದುರ್ನಡತೆ ಮತ್ತು ಕ್ರಿಮಿನಲ್ ಕೇಸ್‌ಗಳಲ್ಲಿ ಭಾಗಿಯಾಗಿರುವ ರಾಜ್ಯ ಲೋಕಾಯುಕ್ತ ವಿಶೇಷ ತನಿಖಾ ದಳದ ಮುಖ್ಯಸ್ಥ ಎಡಿಜಿಪಿ ಎಂ. ಚಂದ್ರಶೇಖರ್ ಅವರನ್ನು ಭಾರತೀಯ ಸೇವೆಯಿಂದ ಅಮಾನತುಗೊಳಿಸಬೇಕು. ಅವರ ವಿರುದ್ಧ ಉನ್ನತ ಮಟ್ಟದ ತನಿಖೆ ನಡೆಸಿ ಎಂದು ಒತ್ತಾಯಿಸಿ, ಜನತಾ ದಳದ ತಾಲ್ಲೂಕು ಘಟಕದ ವತಿಯಿಂದ ತಾಲೂಕು ಅಧ್ಯಕ್ಷ ಜಿ.ಗಣೇಶ್‌ಮೂರ್ತಿನೇತೃತ್ವದಲ್ಲಿ ತಹಶೀಲ್ದಾರ್ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು. ಮನವಿಯಲ್ಲಿ ಕೇಂದ್ರದ ಸಚಿವರಾಗಿರುವ ಹೆಚ್.ಡಿ. ಕುಮಾರಸ್ವಾಮಿ ಅವರ ಬಗ್ಗೆ ಕೀಳುಮಟ್ಟದ ಪದ ಬಳಕೆ ಮಾಡಿರುವ ಎಡಿಜಿಪಿ ಎಂ. ಚಂದ್ರಶೇಖರ್ ಅವರನ್ನು ಸೇವೆಯಿಂದ ಅಮಾನತುಗೊಳಿಸಬೇಕು. ಅವರು ಹೆಚ್.ಡಿ. ಕುಮಾರಸ್ವಾಮಿ ಅವರ ಬಳಿ ಕ್ಷಮೆಯಾಚಿಸಬೇಕು. ಇಲ್ಲವಾದಲ್ಲಿ ಉಪವಾಸ ಸತ್ಯಾಗ್ರಹ ಮಾಡಲಾಗುವುದು ಎಂದು ತಿಳಿಸಲಾಗಿದೆ. ' ಈ ಸಂಧರ್ಬದಲ್ಲಿ ತಾಲ್ಲೂಕು ಜನತಾದಳದ ಅಧ್ಯಕ್ಷ ಜಿ. ಗಣೇಶಮೂರ್ತಿ, ಜೆಡಿಎಸ್ ಮುಖಂಡರುಗಳಾದ ಬಿ. ಮೈಲಾರಪ್ಪ, ಕಿರಣ್, ಈರಣ್ಣ, ರಾಮಣ್ಣ, ತಿಮ್ಮಣ್ಣ, ತಿಪ್ಪೇಶ್, ಕರಿಯಪ್ಪ, ಮಂಜುನಾಥ್ ಸೇರಿದಂತೆ ಹಲವು ಕಾರ್ಯಕರ್ತರಿದ್ದರು.

### ಕುಡಿತ ತ್ಯಜಿಸಿದರೆ ಮಾತ್ರ ಚಂದನ ಬದುಕು ಸಾಧ್ಯ



» **ಚಳ್ಳಕೆರೆ**

ಗಾಂಧೀಜಿಯವರು ಮಧ್ಯಮುಕ್ತ ದೇಶ ನಿರ್ಮಿಸಬೇಕು ಎಂಬ ಕನಸನ್ನು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆ ಮಧ್ಯವರ್ಜನ ಶಿಬಿರದ ಮೂಲಕ ಅದನ್ನು ಸಕಾರಗೊಳಿಸುತ್ತಿದೆ ಎಂದು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆಯದ್ದು ಎಂದು ಜಿಲ್ಲಾ ನಿರ್ದೇಶಕ ವಿನಯ್‌ಸುವರ್ಣ ತಿಳಿಸಿದರು.

ಅವರು, ನಗರದ ಬಸವೇಶ್ವರ ಆಂಗ್ಲಮಾಧ್ಯಮ ಶಾಲೆಯಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಮ್ಮಿಕೊಂಡಿದ್ದ ಗಾಂಧಿ ಸ್ಮೃತಿ ಮತ್ತು ವ್ಯಸನ ಮುಕ್ತರ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ವೀರೇಂದ್ರಹೆಗ್ಗಡೆಯವರ ಮಾರ್ಗದರ್ಶನದಲ್ಲಿ ವ್ಯಸನಮುಕ್ತ ಸಮಾವೇಶದ ಮೂಲಕ ಸಮಾಜದಕ್ಕೆ ಕಂಟಕಪ್ರಾಯರಾಗಿ ಕಾಡುವ ಕುಡುಕರಲ್ಲೂ ಜಾಗೃತಿ ಮೂಡಿಸ ಅವರೂ ಈ ಸಮಾಜದಲ್ಲಿ ಉತ್ತಮ ಬದುಕು ಕಂಡುಕೊಳ್ಳಲು ಸಹಕಾರ ನೀಡಲಾಗುತ್ತಿದೆ ಎಂದರು. ಉಪನ್ಯಾಸ ನೀಡಿದ ಬ್ರಹ್ಮಚೈತನ್ಯ ನಾಮಸಾಧನ ಟ್ರಸ್ಟ್ ಅಧ್ಯಕ್ಷ ಪಿ.ರವೀಂದ್ರನಾಥ, ಗಾಂಧೀಜಿಯವರ ತತ್ವಾದರ್ಶಗಳನ್ನು ಯಾರು ತಮ್ಮ ಬದುಕಿನಲ್ಲಿ ರೂಢಿಸಿಕೊಂಡು ಹೋಗುತ್ತಾರೋ ಅವರು ಸಾರ್ಥಕತೆಯತ್ತ ಹೆಜ್ಜೆ ಇಡುತ್ತಾರೆ. ರಾಷ್ಟ್ರಪಿತ ಮಹಾತ್ಮಗಾಂಧೀಜಿಯವರ ಆದರ್ಶಗಳು ಎಲ್ಲರನ್ನು ಉತ್ತಮ ಸಮಾಜ ನಿರ್ಮಾಣಕ್ಕೆ ಪ್ರೇರಣೇಪರಣೆ ನೀಡುತ್ತದೆ. ತತ್ವ, ಸಿದ್ದಾಂತ, ಆಚಾರ, ವಿಚಾರಗಳು ನಮ್ಮಲ್ಲಿ ಉಂಟಾದಾಗ ಮಾತ್ರ ನಾವು ಸಮಾಜಕ್ಕೆ ಉತ್ತಮ ಕೊಡುಗೆ ನೀಡಲು ಸಾಧ್ಯವಾಗುತ್ತದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಾಣಿಜ್ಯೋದ್ಯಮಿ ಎನ್.ಟಿ.ಪ್ರಕಾಶ್ ವಹಿಸಿದ್ದರು. ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಜೈತುಂಬಿ, ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಬಿ.ಸಿ.ಸಂಜೀವಮೂರ್ತಿ, ಯು.ಎಸ್.ವಿಷ್ಣುಮೂರ್ತಿರಾವ್, ಎಂ.ಎನ್. ಮೃತ್ಯುಂಜಯ, ನೇತಾಜಿಪ್ರಸನ್ನ, ಕಿಶೋರ್‌ಶೆಟ್ಟಿ, ಕೆ.ಎಂ.ಜಗದೀಶ್, ಯೋಜನಾಧಿಕಾರಿ ಶಶಿಕಲಾ, ದೊಡ್ಡರಂಗಪ್ಪ,ಕೆ.ಎಂ.ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

### ಉಚಿತ ಆರೋಗ್ಯ ಮತ್ತು ಹೃದಯ ತಪಾಸಣಾ ಶಿಬಿರ

» **ಚನ್ನಮ್ಮನಾಗತಿಹಳ್ಳಿ**

ಅ.07 ಸೋಮವಾರ ಉಚಿತ ಆರೋಗ್ಯ ಮತ್ತು ಹೃದಯ ತಪಾಸಣಾ ಶಿಬಿರ. ಪರಶುರಾಂಪುರ- ಎಸ್ ಎಸ್ ನಾರಾಯಣ ಹೆಲ್ತ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ದಾವಣಗೆರೆ, ಬೆಂಗಳೂರಿನ ವೈದೇಹಿ ಆಸ್ಪತ್ರೆ ಹಾಗೂ ಸಿಡಿಲು ಸಂತ ಸ್ವಾಮಿ ವಿವೇಕಾನಂದ ಸಮಾಜ ಸೇವಾ ಸಂಸ್ಥೆ ,ಆರೋಗ್ಯ ಇಲಾಖೆ ಮತ್ತು ಗ್ರಾಮ ಪಂಚಾಯಿತಿ ಸಂಯುಕ್ತ ಆಶ್ರಯದಲ್ಲಿ ಉಚಿತ ಆರೋಗ್ಯ ಮತ್ತು ಹೃದಯ ತಪಾಸಣಾ ಶಿಬಿರ ನಡೆಯಲಿದೆ. ಹೋಬಳಿ ವ್ಯಾಪ್ತಿಯ ಚನ್ನನಾಗತಿಹಳ್ಳಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಅ.7 ಸೋಮವಾರ ಬೆಳಗ್ಗೆ ಹತ್ತರಿಂದ ಎರಡು ಗಂಟೆ ತನಕ ಆರೋಗ್ಯ ಶಿಬಿರ ಆಯೋಜಿಸಲಾಗಿದೆ.

**ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶ ರೋಣ ವಾಸುದೇವ ಸಲಹೆ**

# ಜನಸಾಮಾನ್ಯರು ಕಾನೂನು ತಿಳಿಯಲು ಗ್ರಾಮ ಮಟ್ಟದಲ್ಲಿಯೇ ಕಾನೂನು ಅರಿವು ಕೇಂದ್ರ ಸ್ಥಾಪನೆ

» **ಹೊಸದುರ್ಗ**



ಚನ್ನಸಮುದ್ರ ಗ್ರಾಮಗಳಲ್ಲಿ ನುರಿತ ನ್ಯಾಯಾಧವಾದಿ ಒದಗಿಸಿ ಗ್ರಾಮದಲ್ಲಿ ತಲೆದೋರುವ ಪರಿಹಾರ ಕಂಡುಕೊಳ್ಳಲು ಉಚಿತ ಕಾನೂನು ಸಲಹಾ ಕೇಂದ್ರವನ್ನು ಸ್ಥಾಪನೆ ಮಾಡಿದ್ದೇವೆ. ಕೇವಲ ಒಂದೇ ಇಲಾಖೆಯಿಂದ ಎಲ್ಲಾ ಸಾರ್ವಜನಿಕ ಕೆಲಸವನ್ನು ಮಾಡಲು ಸಾಧ್ಯವಿಲ್ಲ ಮತ್ತು ನ್ಯಾಯಾಂಗ ಇಲಾಖೆಯೇ ಎಲ್ಲವನ್ನು ಬಗೆಹರಿಸುತ್ತೇವೆ ಎಂಬುದು ಸಾಧ್ಯವಿಲ್ಲ. ಕೆಲವು ಸಣ್ಣ ಪುಟ್ಟ ಸಮಸ್ಯೆಗಳನ್ನ ಗ್ರಾಮ ಮಟ್ಟದಲ್ಲಿ ಬಗೆಹರಿಸಿಕೊಳ್ಳಲು ಕಾನೂನು ಇಲಾಖೆಯಿಂದ ಉಚಿತ ಕಾನೂನು ಸಲಹಾ ಕೇಂದ್ರದ ವ್ಯವಸ್ಥೆ ಮಾಡಲಾಗಿದೆ. ನ್ಯಾಯವಾದಿ ಯುವರಾಜ್ ಪ್ರತಿ ಸೋಮವಾರ ಮತ್ತು ಗುರುವಾರದಂದು ಸೇವೆಯನ್ನು ಉಚಿತವಾಗಿ ಕೊಡುವರು. ಸಮಸ್ಯೆಗಳಿಗೆ ಇಲ್ಲಿಯ ಪರಿಹಾರ ಕಂಡುಕೊಳ್ಳಲಾಗುವುದು. ಅನವಶ್ಯಕವಾಗಿ ಯಾರು ಕೋರ್ಟ್ ಅಲೆಯಬಾರದು ಎಂದು ಚಿತ್ರದುರ್ಗ

ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶ ರೋಣ ವಾಸುದೇವ ತಿಳಿಸಿದರು "

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಜಿಲ್ಲಾ ಪಂಚಾಯತಿ ಚಿತ್ರದುರ್ಗ, ಕಾನೂನು ಸೇವಾ ಸಮಿತಿ ವಕೀಲರ ಸಂಘ ತಾಲೂಕ್ ಪಂಚಾಯಿತಿ ಅಭಿಯೋಜನೆ ಇಲಾಖೆ ಅರಣ್ಯ ಇಲಾಖೆ ವತಿಯಿಂದ ಈ ದಿನ ತಾಲೂಕಿನ ಚನ್ನಸಂದ್ರದಲ್ಲಿ ನಡೆದ ಉಚಿತ ಕಾನೂನು ಸಲಹ ಕೇಂದ್ರದ ಉದ್ಘಾಟನಾ ಕಾರ್ಯಕ್ರಮದಲ್ಲಿ

ಮಾತನಾಡಿದ ಅವರು ಗಿಡಮರಗಳನ್ನು ಬೆಳೆಸಲು ನಾವು ಆಸಕ್ತಿ ತೋರಿಸುತ್ತಿಲ್ಲ. ಮನೆ ಕಟ್ಟಲು ಮುಚ್ಚಿ ಟೇಬಲ್ ಮಾಡಲು, ಬಂಡೆಯನ್ನು ಮಾಡಲು ಮರಗಳನ್ನು ಬಳಸುತ್ತೇವೆ ಆದರೆ ಗಿಡಗಳನ್ನು ಬೆಳೆಸಲು ಯಾರು ತಯಾರಿಲ್ಲ ರೋಗಗಳು ಹೆಚ್ಚಾಗಿ ಅನಾಹುತ ಅನಾರೋಗ್ಯಗಳು ಸಂಭವಿಸುತ್ತದೆ.

ತಾಯಿ ಹೆಸರಿನಲ್ಲಿ ನಾವು ಒಂದು ಗಿಡವನ್ನು ನೆಡಬೇಕು ಎಲ್ಲ ಮಕ್ಕಳು ಅವರ ತಾಯಿ ಹೆಸರಿನಲ್ಲಿ ಒಂದೊಂದು ಗಿಡ ನೀಡಲೇಬೇಕು ತಾಯಿ ಮಕ್ಕಳನ್ನು ಬೆಳೆಸಿದ ಹಾಗೆ ಗಿಡಗಳು ಬೆಳೆಯುತ್ತವೆ ಮುಂದೆ ಇದರಿಂದ ಪರಿಶುದ್ಧ ಗಾಳಿ ಪಡೆಯಲು ಸಾಧ್ಯವಾಗುತ್ತದೆ ಮತ್ತು ಕೃತಕ ಉಸಿರಾಟದ ವ್ಯವಸ್ಥೆ ತಪ್ಪಿಸಿದಂತಾಗುತ್ತದೆ. ಕೊರೋನ ಸಂದರ್ಭದಲ್ಲಿ ಶುದ್ಧ ಗಾಳಿ ಸಿಗದೆ ಉಸಿರಾಟದ ತೊಂದರೆಯಿಂದ ಬಹಳಷ್ಟು ಜನ ಮರಣ ಹೊಂದಿದರು.

ಈ ಭಾಗದ ಜನರು ಹೆಚ್ಚು ಹೆಚ್ಚು ಗಿಡಗಳನ್ನು ನೆಡುವುದರ ಮೂಲಕ ಹೊಸದುರ್ಗ ಮುಂದೊಮ್ಮೆ ಹಸಿರು ದುರ್ಗವಾಗಿ ಬೆಳೆಸಲಿ.ಪ್ರಸ್ತುತ ಆದೇಶದಲ್ಲೆಡೆ ವಾಹನ ಸಂಖ್ಯೆ ಹೆಚ್ಚಾಗಿ ಇದರಿಂದ ವಾಯುಮಾಲಿನ್ಯ ಹೆಚ್ಚಾಗಿ ಉಸಿರಾಡಲು ಆಮ್ಲಜನಕ ಸಿಗುತ್ತಿಲ್ಲ.ಅರಣ್ಯ ಇಲಾಖೆಯ ಮಾರ್ಗದರ್ಶನದಿಂದ ಹೆಚ್ಚು ಹೆಚ್ಚು ಗಿಡಗಳನ್ನು ಸಾರ್ವಜನಿಕ ಸ್ಥಳಗಳಲ್ಲಿ ನೆಡುವುದರ ಮೂಲಕ ಮುಂದಿನ ಬೆಳಗೆಗೆ ಉತ್ತಮ ಭವಿಷ್ಯ ನೀಡುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಇತ್ತೀಚಿನ ದಿನಗಳಲ್ಲಿ ನಿವೇಶನ ಹಾಗೂ ಜಮೀನಿನ ವಿಚಾರಗಳನ್ನು ಅಷ್ಟೇ ಮಾತನಾಡುತ್ತಿದ್ದಾರೆ ಆದರೆ ಪರಿಸರದ ಬಗ್ಗೆ ಯಾರೂ ಕಾಳಜಿ ವಹಿಸುತ್ತಿಲ್ಲ ಗಿಡಗಳನ್ನು ಘೋಷಣೆ ಮಾಡಿ ಬೆಳೆಸಲೇಬೇಕು ಎಂದರು.

ಚಿತ್ರದುರ್ಗ ಜಿಲ್ಲಾ ಪಂಚಾಯಿತಿ ಸಿಇಒ ಎಸ್ ಜಿ ಸೋಮಶೇಖರ್ ಮಾತನಾಡಿ ನ್ಯಾಯಾಂಗ ಇಲಾಖೆಯಿಂದ ಉಚಿತ ಕಾನೂನು ಸಲಹಾ ಕೇಂದ್ರ ಈ ಭಾಗದಲ್ಲಿ ಪ್ರಾರಂಭ ಮಾಡಿದ್ದಾರೆ. ಇಲ್ಲಿಯ ವಕೀಲರ ಸಲಹೆ ಮತ್ತು ನೆರವನ್ನ ಈ ಭಾಗದ ಜನರು ಸದುಪಯೋಗಪಡಿಸಿಕೊಳ್ಳಬೇಕು. ಕಾನೂನಾತ್ಮಕ ಸಮಸ್ಯೆಗಳಿಗೆ ಇಲ್ಲಿ ಸಲಹೆ ನೀಡಲಾಗುವುದು ಉತವಾಗಿ ನೆರವನ್ನ ಪಡೆದುಕೊಳ್ಳಬಹುದು. ಮುಂದಿನ ದಿನಗಳಲ್ಲಿ ಹೆಚ್ಚು ಹೆಚ್ಚು ಗ್ರಾಮಗಳಲ್ಲಿ ಕಾನೂನಿನ ಅರಿವಿನ ಕೇಂದ್ರಗಳನ್ನ ಜಿಲ್ಲಾ ನ್ಯಾಯಾಧೀಶರು ಸ್ಥಾಪಿಸಲು ಇಚ್ಛೆಪಡಿಸಿದ್ದಲ್ಲಿ ಜಿಲ್ಲಾ ಪಂಚಾಯಿತಿಯಿಂದ ಸ್ಥಳಾವಕಾಶಗಳನ್ನು ಮಾಡಿಕೊಡಲಾಗುವುದು ಎಂದರು.

ವಕೀಲರ ಸಂಘದ ಅಧ್ಯಕ್ಷ ಎಚ್ ಡಿ ರವಿಕುಮಾರ್ ಮಾತನಾಡಿ ಗ್ರಾಮೀಣ ಮಟ್ಟದಲ್ಲಿ ಕಾನೂನು ಅರಿವು ತಿಳಿಸುವ ಉದ್ದೇಶವಿದ್ದು ಬಡ ಜನರಿರುವ ಭಾರತ ದೇಶದಲ್ಲಿ ಯಾವುದಕ್ಕೆ ದಾಖಲಾದಾಗ ಅದನ್ನು ನಡೆಸಲು ಅವರ ಬಳಿ ಹಣವು ಇರುವುದಿಲ್ಲ. ಸಣ್ಣ ಸಣ್ಣ ಗಲಾಟೆಯಿಂದಾಗಿ ಬಡ ಜನರ ಹಣ ಖರ್ಚಾಗಿ ತೊಂದರೆಗೆಡಾಗುತ್ತಾರೆ ಎಂಬ ಉದ್ದೇಶದಿಂದ ಕಾನೂನು ಸೇವಾ ಸಲಹಾ ಕೇಂದ್ರ ಸ್ಥಾಪಿಸಿದ್ದು ನೊಂದವರು ಕೇಂದ್ರಕ್ಕೆ ಬಂದು ಸಲಹೆ ಪಡೆದು ನೆಮ್ಮದಿ ಜೀವನ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಜೆಎಂಎಫ್ ಸಿ ಹಿರಿಯ ಸಿವಿಲ್ ನ್ಯಾಯಾಧೀಶ ವೈ.ಕೆ, ಬೇನಾಳ, ಹಿರಿಯ ಸಿವಿಲ್ ನ್ಯಾಯಾಧೀಶ ಎಂ ವಿಜಯ, ಪ್ರಧಾನ ಸಿವಿಲ್ ನ್ಯಾಯಾಧೀಶ, ಪ್ರಸನ್ನ ಕುಮಾರ್ ಅಪರ ಸಿವಿಲ್ ನ್ಯಾಯಾದೀಶೆ ಎಂ ಎನ್ ತ್ರಿನೇತ್ರ, ವಕೀಲರ ಸಂಘದ ಅಧ್ಯಕ್ಷ ಎ□□ಬಿ ರವಿಕುಮಾರ್, ಸರ್ಕಾರಿ ಅಭಿಯೋಜಕರಾದ ಶಶಿಕಲಾ ವಕೀಲರ ಸಂಘದ ಉಪಾಧ್ಯಕ್ಷ ಜಗದೀಶ್ ನಾಯಕ್,ಕಾರ್ಯದರ್ಶಿ ರಮೇಶ್, ಪಾಪಂ ಕಾರ್ಯನಿರ್ವಾಹಕ ಅಧಿಕಾರಿ ಸುನಿಲ್, ವಲಯ ಅರಣ್ಯ ಅಧಿಕಾರಿ ಸುನಿಲ್ ಕುಮಾರ್ ಗ್ರಾಪಂ ಅಧ್ಯಕ್ಷೆ ರಂಗಮ್ಮ , ಜಯಣ್ಣ ವಕೀಲರಾದ ಜಗದೀಶ್, ಯುವರಾಜ್, ಮೈಲಾರಪ್ಪ, ಈರಪ್ಪ, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಜಯಣ್ಣ, ಗ್ರಾಪ್ರಂ ಸದಸ್ಯ ತಿಪ್ಪೇಶ್, ಹಾಗೂ ಗ್ರಾಮಸ್ಥರು ಪಾಲ್ಗೊಂಡಿದ್ದರು.

# ನಗರದ ವಸತಿ ರಹಿತರಿಗಾಗಿ ಮನೆ ನಿರ್ಮಿಸಲು 21 ಎಕರೆ ಜಾಗ ಕಾಯ್ದಿರಿಸಿದ ಹೊಸದುರ್ಗ ಶಾಸಕ

» **ಹೊಸದುರ್ಗ**



ಗೊರವಿನಕಲ್ಲು ರಿ.ಸ.ನಂ.86 ರಲ್ಲಿ 21 ಎಕರೆ ಜಾಗವನ್ನು ಡೀಮ್ಡ್ ಫಾರೆಸ್ಟ್ ಇಂದ ಪುನಃ ಕಂದಾಯ ಇಲಾಖೆಗೆ ಪಡೆದು ಆಶ್ರಯ ಯೋಜನೆಯಡಿ ಪುರಸಭೆಗೆ ಹಸ್ತಾಂತರಿಸುವ ಸ್ಥಳವನ್ನು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ತಹಶೀಲ್ದಾರ್, ಮುಖ್ಯಾಧಿಕಾರಿ, ಅರಣ್ಯಾಧಿಕಾರಿ ಹಾಗೂ ಸರ್ವೇಯರ್ ತಂಡ ಪರಿಶೀಲಿಸಿದ್ದು ತುರ್ತಾಗಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು ಎಂದು ಶಾಸಕ ಬಿ.ಜಿ.ಗೋವಿಂದಪ್ಪ ತಿಳಿಸಿದರು.

ಪಟ್ಟಣಕ್ಕೆ ಸಮೀಪವರುವ ಗೊರವಿನಕಲ್ಲು ರಿ.ಸ.ನಂ.86 ರಲ್ಲಿ 21 ಎಕರೆ ಜಾಗವನ್ನು ಪರಿಶೀಲಿಸಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ಪಟ್ಟಣದ ವ್ಯಾಪ್ತಿಯಲ್ಲಿ 23 ವಾರ್ಡ್‌ಗಳಿದ್ದು ಸುಮಾರು 35 ಸಾವಿರ ಜನ ಪಟ್ಟಣ ವಾಸಿಗಳಾಗಿದ್ದು 1500 ಕ್ಕು ಹೆಚ್ಚು ವಸತಿ ರಹಿತ ಬಡ ಕುಟುಂಬಗಳು ಗುರುತಿಸಲಾಗಿದ್ದು ನಿವೇಶನ ಮತ್ತು ವಸತಿ ಕಲ್ಪಿಸುವ ದೃಷ್ಠಿಯಿಂದ ಈ ಸ್ಥಳವನ್ನ ಆಯ್ಕೆ ಮಾಡಲಾಗಿದೆ ಎಂದರು

ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು.ಜಿ.ವಿ ಮಾತನಾಡಿ ಪುರಸಭಾ ಸದಸ್ಯರು ಹಾಗೂ ವಿವಿಧ ಇಲಾಖೆಗಳ ಸಹಕಾರದೊಂದಿಗೆ ಜಾಗ ದೊರಕಿರುವುದು ಅತ್ಯಂತ ಸಂತಸವಾಗಿದ್ದು ಜಿಲ್ಲಾಧಿಕಾರಿಗಳಾದ ಟಿ.ವೆಂಕಟೇಶ್ ರವರು ಪೌರಕಾರ್ಮಿಕರು ಹಾಗೂ ಜಿಲ್ಲಾ ಸಫಾಯಿ ಕರ್ಮಚಾರಿಗಳ ನಿಗಾ ಸಮಿತಿಯ ಅಧ್ಯಕ್ಷರಾಗಿದ್ದು ಕಾರ್ಮಿಕರಿಗೆ ಮತ್ತು ನೀರು ಸರಬರಾಜು ಸಹಾಯಕರಿಗೆ 3 ಎಕರೆ ಪ್ರತ್ಯೇಕ ಜಾಗವನ್ನು ಕಾಯ್ದಿರಿಸಿರುವುದನ್ನು ಸ್ಥಳ ಪರಿಶೀಲಿಸಿ ಕಾರ್ಮಿಕರನ್ನು ಮುಖ್ಯ ವಾಹಿನಿಗೆ ತರಲು ಎಲ್ಲಾ ಅಗತ್ಯ ಕ್ರಮ ಕೈಗೊಳ್ಳುವಂತೆ ನನಗೆ ಸೂಚಿಸಿ ಇತರೆ ಎಲ್ಲಾ ಸೌಲಭ್ಯಗಳನ್ನು ಸಹ ನೀಡಿ ಪಟ್ಟಣವನ್ನು ಸ್ವಚ್ಛವಾಗಿಡಲು ಹಾಗೂ ಸಮರ್ಪಕ ಕುಡಿಯುವ ನೀರಿಗೆ ಆದ್ಯತೆ ನೀಡುವಂತೆ ಹೇಳಿದ್ದಾರೆ ಎಂದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ತಿರುಪತಿ ಪಾಟೀಲ್, ವಲಯ ಅರಣ್ಯಾಧಿಕಾರಿ ಸುನಿಲ್, ಸರ್ವೇಯರ್ ಕರಿಯಪ್ಪ, ಎ.ಡಿ.ಎಲ್.ಆರ್ ವಿನಯ್, ಕಂದಾಯಾಧಿಕಾರಿ ಯೋಗೇಶ್, ಕಂದಾಯ ಇಲಾಖೆಯ ಅಧಿಕಾರಿಗಳಾದ ಹರೀಶ್, ರಾಘವೇಂದ್ರ ಹಾಜರಿದ್ದರು.

### ಹೊಸದುರ್ಗದಲ್ಲಿ ಗಾಂಧಿ ಭಾರತ ಪಾದಯಾತ್ರೆ



» **ಹೊಸದುರ್ಗ**


ರಾಷ್ಟ್ರಪಿತ ಗಾಂಧಿ ಜಯಂತಿ ಪ್ರಯುಕ್ತ ಪಟ್ಟಣದ ಕಾಂಗ್ರೆಸ್ ಕಚೇರಿಯಿಂದ ಗಾಂಧಿ ವೃತ್ತದಲ್ಲಿ ಮಹಾತ್ಮ ಗಾಂಧೀಜಿ ಪ್ರತಿಮೆಗೆ ಶಾಸಕ ಬಿ.ಜಿ ಗೋವಿಂದಪ್ಪ ಮಾಲಾರ್ಪಣೆ ಮಾಡಿ ಅಂಬೇಂಡ್ಕರ್ ವೃತ್ತದವರೆಗೆ ನಡೆದ ಗಾಂಧಿ ಭಾರತ ಪಾದಯಾತ್ರೆಯಲ್ಲಿ ಭಾಗವಹಿಸಿ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. ಗಾಂಧೀಜಿ ಅವರ ಅಧ್ಯಕ್ಷತೆಯಲ್ಲಿ ನಡೆದ ಅಖಿಲ ಭಾರತ ಕಾಂಗ್ರೆಸ್ ಅಧಿವೇಶನಕ್ಕೆ 100 ವರ್ಷಗಳಾದ ಹಿನ್ನೆಲೆಯಲ್ಲಿ ಕೆಪಿಸಿಸಿ ಅಧ್ಯಕ್ಷರ ಆದೇಶದ ಮೇರೆಗೆ 'ಗಾಂಧಿ ನಡಿಗೆ' 1 ಕಿ.ಮೀ ಪಾದಯಾತ್ರೆ ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಕೆಪಿಸಿಸಿ ಸದಸ್ಯರಾದ ಎಂ.ಪಿ. ಶಂಕರ್,ಅಲ್ತಾಫ್ ಪಾಷಾ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅನಂತಪದ್ಮನಾಭ್, ಲೋಕೇಶ್ವರಪ್ಪ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ,ದೀಪಿಕಾ ಸತೀಶ್ ನಗರ ಘಟಕದ ಅಧ್ಯಕ್ಷ ಅಗ್ರೋ ಹೆಚ್. ಶಿವಣ್ಣ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಡಾ: ಅನಂತ್ ಕಾಂಗ್ರೆಸ್ ಮುಖಂಡರಾದ ಕೆ.ಸಿ.ನಿಂಗಪ್ಪ, ಗ್ಯಾರಂಟಿ ಅನುಷ್ಠಾನ ಕಮಿಟಿಯ ಉಪಾಧ್ಯಕ್ಷ ಎಸ್. ಖಾದರ್‌ನವಾಜ್, ಸುಹಾನ ಸಹಕಾರ ಸಂಘದ ಅಧ್ಯಕ್ಷ ಬಿ.ಅಶ್ರಫುಲ್ಲ,ಪಾಪಣ್ಣಿ, ಬಿ.ಜಿ.ಅರುಣ್‌ಗೋವಿಂದಪ್ಪ, ಕೆ.ಟಿ.ಮಂಜುನಾಥ್,ಶಂಕರಪ್ಪ ಸೇರಿದಂತೆ ತಾಲೂಕ್ ಪಂಚಾಯತಿ ಹಾಗೂ ಪುರಸಭಾ ಸದಸ್ಯರುಗಳು,ಹಾಗೂ ಎಲ್ಲಾ ಘಟಕದ ಪದಾಧಿಕಾರಿಗಳು, ಕಾರ್ಯಕರ್ತರು ಹಾಜರಿದ್ದರು.

## ಪ್ರಮುಖ ಸುದ್ದಿ

**ನಿಮ್ಮೆಲ್ಲರ ಸಹಕಾರ ಹಾಗೂ ಮಾರ್ಗದರ್ಶನದ ಮೂಲಕ ಅಭಿವೃದ್ಧಿಪಡಿಸುವ ಕೆಲಸ ಮಾಡುವೆ: ನವೀನ್**

# ಜೀವನದಲ್ಲಿ ಭ್ರಷ್ಟಾಚಾರ ಎಂಬ ಪದ ನನ್ನ ಹತ್ತಿರ ಸುಳಿಯಬಾರದು

» **ಹೊಸದುರ್ಗ**



ತಾಲ್ಲೂಕಿನಲ್ಲಿ ಕೈಗಾರಿಕಾ ಉದ್ದಿಮೆಗಳನ್ನ ಸ್ಥಾಪಿಸಿ ಯುವಕರಿಗೆ ಒಳ್ಳೆಯ ಉದ್ಯೋಗವಕಾಶ ಸಿಗುವಂತೆ ಮಾಡುವ ಸಿದ್ಧತೆಯಿದೆ. ನನ್ನ ತಂದೆಯ ಊರು ಪಕ್ಕದ ತಾಲೂಕಿನ ಎನ್.ಜಿ.ಹಳ್ಳಿ. ಆದರೆ, ನನ್ನೆಲ್ಲಾ ಆಸ್ತಿ ಜಮೀನು, ತೋಟ, ಮನೆ ಎಲ್ಲ ಇರುವುದು ಹೊಸದುರ್ಗ ತಾಲೂಕಿನಲ್ಲಿಯೇ. ನಾನು ಹೊಸದುರ್ಗ ತಾಲ್ಲೂಕಿನ ವ್ಯಕ್ತಿಯೇ, ಹೊಸದುರ್ಗ ತಾಲೂಕಿನ ಬಗ್ಗೆ ನನಗೆ ವಿಶೇಷವಾದ ಕನಸಿದ್ದು, ಮುಂದಿನ ದಿನಗಳಲ್ಲಿ ನಿಮ್ಮೆಲ್ಲರ ಸಹಕಾರ ಹಾಗೂ ಮಾರ್ಗದರ್ಶನದ ಮೂಲಕ ಅಭಿವೃದ್ಧಿಪಡಿಸುವ ಕೆಲಸ ಮಾಡುವೆ ಎಂದು ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ಹೇಳಿದರು.

ಪಟ್ಟಣದ ಸಿದ್ದರಾಮೇಶ್ವರ ಸಮುದಾಯ ಭವನದಲ್ಲಿ ಅಭಿಮಾನಿಗಳು ಆಯೋಜಿಸಿದ್ದ 50ನೇ ವರ್ಷದ ಸಂಭ್ರಮಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು,

ನನ್ನ ರಾಜಕೀಯ ಜೀವನದಲ್ಲಿ ಭ್ರಷ್ಟಾಚಾರ ಎಂಬ ಪದ ನನ್ನ ಹತ್ತಿರ ಸುಳಿಯಬಾರದು ಎಂದು ಶುದ್ಧ ರಾಜಕಾರಣ ಮಾಡುತ್ತಿದ್ದೇನೆ. ಗ್ರಾಮ ಪಂಚಾಯಿತಿ ಸದಸ್ಯರು ನನಗೆ ಬೆಂಬಲ ನೀಡಿ ವಿಧಾನ ಪರಿಷತ್ಗೆ ಆಯ್ಕೆ ಮಾಡಿ ಕಳಿಸಿದ್ದಾರೆ. ಬಿಜೆಪಿ ಪಕ್ಷಕ್ಕಾಗಿ ಹಗಲು ಇರುಳು ಶ್ರಮಿಸಿ ಟ್ರಾಕ್ಟರ್ ಅಪಘಾತಕ್ಕೆ ಸಿಲುಕಿ ದುರ್ಮರಣ ಹೊಂದಿದ ಪ್ರದೀಪ್ ಸ್ವಾಮಿ ಮಗಳ ಸಂಪೂರ್ಣ ವಿದ್ಯಾಭ್ಯಾಸದ ವೆಚ್ಚವನ್ನು ವಹಿಸಿಕೊಳ್ಳುತ್ತೇನೆ. ಮತ್ತೋಡು ಸಮೀಪದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಿಗಾಗಿ ಕಾರ್ಯಾಲಯವನ್ನು 1.5 ಕೋಟಿ.ವೆಚ್ಚದಲ್ಲಿ ನಿರ್ಮಾಣ ಮಾಡಲಾಗುವುದು. ಇದೇ ರೀತಿಯಾಗಿ 10 ಕಡೆ ನಿರ್ಮಾಣ ಮಾಡುವ ಯೋಜನೆ ಎಂದರು.


Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T